EMAIL : dairyadadaari@gmail.com ಸಂಪುಟ: 01 ಸಂಚಿಕೆ: 102

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 28-03-2026


# ತೈಲ ಅಬಕಾರಿ ಸುಂಕ ಕಡಿತ ಮಾಡಿದ ಕೇಂದ್ರ ಸರ್ಕಾರ

**ನವದೆಹಲಿ, ಮಾ.27:** ತೈಲದ ಮೇಲಿನ ಅಬಕಾರಿ ಸುಂಕವನ್ನು ಕೇಂದ್ರ ಸಕಾರ ಇಳಿಕೆ ಮಾಡುವ ಮೂಲಕ ಪೆಟ್ರೋಲ್ , ಡಿಸೇಲ್ ಬೆಲೆ ಏರಿಕೆಯ ಆತಂಕದಲ್ಲಿದ್ದ ಜನರಿಗೆ ನಿರಾಳ ನೀಡಿದೆ.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಕಚ್ಚಾ ತೈಲ ಬೆಲೆ ಏರಿಕೆಯಾಗಿ ಚಿಲ್ಲರೆ ಮಾರಾಟದ ಪೆಟ್ರೋಲ್ ಮತ್ತು ಡಿಸೇಲ್ ಬೆಲೆ ಏರಿಕೆಯ ಆತಂಕ ಸೃಷ್ಟಿಯಾಗಿತ್ತು. ಆದರೆ ಕೇಂದ್ರ ಸರ್ಕಾರ ತೈಲದ ಅಬಕಾರಿ ಸುಂಕ ಇಳಿಕೆ ಮಾಡುವ ಮೂಲಕ ಬೆಲೆ ಏರಿಕೆ ಹೊರೆಯಿಂದ ಜನರನ್ನು ಮುಕ್ತ ಮಾಡಿದ್ದು, ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಯಥಾಸ್ಥಿತಿಯಲ್ಲೇ ಮುಂದುವರಿಯಲಿದೆ.

ಕೇಂದ್ರ ಸರ್ಕಾರ ಅಬಕಾರಿ ಸುಂಕವನ್ನು ಪ್ರತಿ ಲೀಟರ್ ಪೆಟ್ರೋಲ್‌ಗೆ 3 ರೂಗಳಿಗೆ ಹಾಗೂ ಪ್ರತಿ ಲೀಟರ್ ಡೀಸೆಲ್‌ಗೆ ಶೂನ್ಯ ಇಳಿಕೆ ಮಾಡಿದೆ. ಪ್ರಸ್ತುತ ಪ್ರತಿ ಲೀಟರ್ ಪೆಟ್ರೋಲ್ ಗೆ 13 ರೂ. ಹಾಗೂ ಪ್ರತಿ ಡೀಸೆಲ್ ಗೆ 10 ರೂ. ಅಬಕಾರಿ ಸುಂಕ ಇತ್ತು.

ಜಾಗತಿಕ ಕಚ್ಚಾ ತೈಲ ಬೆಲೆ ಎರಡು ಪಟ್ಟು ಏರಿಕೆಯಾಗಿರುವುದರಿಂದ ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್, ಹೆಚ್‌ಪಿ ಮತ್ತು ಬಿಪಿ, ಪೆಟ್ರೋಲಿಯಂ ಮಾರಾಟ ಕಂಪನಿಗಳು ಪೆಟ್ರೋಲ್, ಡೀಸೆಲ್ ಬೆಲೆ ಏರಿಸಿರುವುದು ಅನಿವಾರ್ಯ ಎನಿಸಿತ್ತು. ಇದನ್ನು ತಪ್ಪಿಸಲು ಜೊತೆಗೆ ಜನಸಾಮಾನ್ಯರಿಗೆ ಬೆಲೆ ಏರಿಕೆ ಬಿಸಿ ತಾಗದಿರಲು ಕೇಂದ್ರ ಸರ್ಕಾರ ಅಬಕಾರಿ ಸುಂಕ ಕಡಿಮೆ ಮಾಡಿದೆ. ಇದರಿಂದ ಪೆಟ್ರೋಲ್, ಡೀಸೆಲ್ ಬೆಲೆ ಇಳಿಯುವುದಿಲ್ಲ. ಆದರೆ ಪೆಟ್ರೋಲಿಯಂ ಕಂಪನಿಗಳಿಗೆ ನಷ್ಟ ಹೊರೆ ಇಳಿಸಲು ಸಹಾಯವಾಗಲಿದೆ. ಜೊತೆಗೆ ಜನಸಾಮಾನ್ಯರಿಗೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಬಿಸಿಯು ತಪ್ಪಲಿದೆ.

ಈ ಕಡಿತದಿಂದ ಸಾಮಾನ್ಯ ಗ್ರಾಹಕರಿಗೆ ತಕ್ಷಣದ ಬೆಲೆ ಇಳಿಕೆ ದೊರೆಯುವ ಸಾಧ್ಯತೆ ಕಡಿಮೆ ಎನ್ನಲಾಗಿದೆ. ತೈಲ ಮಾರುಕಟ್ಟೆ ಕಂಪನಿಗಳು ಈಗಾಗಲೇ ಪ್ರತಿ ಲೀಟರ್ ಪೆಟ್ರೋಲ್ ಮತ್ತು ಡೀಸೆಲ್ ಮಾರಾಟದಲ್ಲಿ ಸುಮಾರು 48.8 ನಷ್ಟ ಅನುಭವಿಸುತ್ತಿರುವುದರಿಂದ, ಸುಂಕ ಕಡಿತದ ಪ್ರಯೋಜನವನ್ನು ಅವರು ತಮ್ಮ ನಷ್ಟವನ್ನು ಸಮತೋಲನಗೊಳಿಸಲು ಬಳಸುವ ಸಾಧ್ಯತೆ ಇದೆ.

ಜಾಗತಿಕ ತೈಲದ ಬೆಲೆ ಕಳೆದ ತಿಂಗಳಲ್ಲಿ 70 ಡಾಲರ್ ರಿಂದ 122 ಡಾಲರ್‌ರವರೆಗೆ ಏರಿಕೆಯಾಗಿದೆ. ಇದರಿಂದ ವಿಶ್ವದಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು 20ರಿಂದ 50 ಶೇಕಡಾ ಏರಿಕೆ ಕಂಡಿವೆ. ಕೇಂದ್ರ ಸರ್ಕಾರ ಜನರ ಮೇಲೆ ಹೆಚ್ಚಿನ ಭಾರ ಹಾಕುವುದನ್ನು ತಪ್ಪಿಸಲು ತನ್ನದೇ ಆದ ಹಣಕಾಸಿನ ಮೇಲೆ ಹೊರೆ ಹೊತ್ತಿದೆ" ಎಂದು ಕೇಂದ್ರ ಪೆಟ್ರೋಲಿಯಂ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕ್ರೂಡ್ ತೈಲದ ಬೆಲೆ ಭಾರೀ ಏರಿಕೆಯಾಗಿದೆ. ಅಮೆರಿಕ- ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಪರಿಣಾಮ, ಹಾರ್ಮುಜ್ ಜಲಸಂಧಿ ನಿರ್ಬಂಧದ ಕಾರಣದಿಂದ ಬ್ರೆಂಟ್ ಕ್ರೂಡ್ ಬೆಲೆ ಬ್ಯಾರೆಲ್‌ಗೆ 100 ಡಾಲರ್ ದಾಟಿ 122 ಡಾಲರ್‌ರವರೆಗೆ ಏರಿಕೆಯಾಗಿದೆ.

ದೇಶದ ಖಾಸಗಿ ಇಂಧನ ಮಾರಾಟ ಕಂಪನಿ ನಯಾರಾ ಎನರ್ಜಿ ಪೆಟ್ರೋಲ್ ಬೆಲೆಯನ್ನು 5ರೂ. ಮತ್ತು ಡೀಸೆಲ್ ಬೆಲೆಯನ್ನು 3ರೂ. ಹೆಚ್ಚಿಸಿದ್ದ ಬೆನ್ನಲ್ಲೇ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಮಾರಾಟ ಮಾಡುವ ಪೆಟ್ರೋಲ್, ಡೀಸೆಲ್ ಬೆಲೆಏರಿಕೆಯು ಆಗಲಿದೆ ಎಂಬ ಆತಂಕ ಸೃಷ್ಟಿಯಾಗಿತ್ತು. ತೈಲದ ಅಬಕಾರಿ ಸುಂಕ ಇಳಿಕೆಯಿಂದ ಈಗ ದೇಶದಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ದರಗಳು ಯತಾಸ್ಥಿತಿಯಲ್ಲಿ ಇರಲಿದೆ. ಹಾಗಾಗಿ ಮುಂದಿನ ದಿನಗಳಲ್ಲಿ ಏರಿಕೆಯಾಗಲಿ, ಇಳಿಕೆಯಾಗಲಿ ಇರುವುದಿಲ್ಲ.

ಅಬಕಾರಿ ಸುಂಕ ಕಡಿತದಿಂದ ಸರ್ಕಾರದ ಹಣಕಾಸಿನ ಮೇಲೆ



ಒತ್ತಡ ಹೆಚ್ಚಿದರೂ, ಗ್ರಾಹಕರಿಗೆ ತಕ್ಷಣದ ಬೆಲೆ ಇಳಿಕೆ ಸಾಧ್ಯತೆ ಕಡಿಮೆ ಎಂಬುದಾಗಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಹಾರ್ಮುಜ್ ಜಲಸಂಧಿ ಜಾಗತಿಕ ಇಂಧನ ಸರಬರಾಜಿನಲ್ಲಿ ಮಹತ್ವದ ಪಾತ್ರವಹಿಸುತ್ತದೆ. ವಿಶ್ವದ ಸುಮಾರು 20–25 ಮಿಲಿಯನ್ ಬ್ಯಾರೆಲ್ ಕಚ್ಚಾ ತೈಲ ಪ್ರತಿದಿನ ಈ ಮಾರ್ಗದ ಮೂಲಕ ಸಾಗುತ್ತದೆ. ಭಾರತವೂ ತನ್ನ ಕಚ್ಚಾ ತೈಲ ಆಮದುಗಳ 40–50 ಶೇಕಡಾವರೆಗೆ ಈ ಮಾರ್ಗದ ಮೇಲೆ ಅವಲಂಬಿತವಾಗಿದೆ.

ಇದರಿಂದ ದೇಶದಲ್ಲಿ ಇಂಧನ ಕೊರತೆಯ ಭೀತಿ ಮೂಡಿದ್ದರೂ, ಸರ್ಕಾರ ಯಾವುದೇ ತುರ್ತು ಸಮಸ್ಯೆ ಇಲ್ಲ ಎಂದು ಸ್ಪಷ್ಟಪಡಿಸಿದೆ. ದೇಶದಲ್ಲಿ ಸುಮಾರು 60 ದಿನಗಳ ಕಚ್ಚಾ ತೈಲ 2ನೇಪುಟಕ್ಕೆ

# ರಾಜ್ಯದಲ್ಲಿ ವಸತಿರಹಿತ ನಿರ್ಗತಿಕರಿಗಾಗಿ ಒಂದು ಸಾವಿರ ವಾತ್ಸಲ್ಯ ಮನೆಗಳ ನಿರ್ಮಾಣ: ಚಂದ್ರಶೇಖರ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ನಮಾಜಗೇರಿ ಗುಡ್ಡದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ವತಿಯಿಂದ ಫಲಾನುಭವಿ ನಾಗಮ್ಮ ರವರಿಗೆ ವಾತ್ಸಲ್ಯ ಮನೆಯಲ್ಲಿ ಹಸ್ತಾಂತರಿಸಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ನ ಪ್ರಾದೇಶಿಕ ನಿರ್ದೇಶಕರಾದ ಚಂದ್ರಶೇಖರ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳದಶ್ರೀ ವೀರೇಂದ್ರ ಹೆಗಡೆಯವರು ರಾಜ್ಯದಲ್ಲಿ ಸ್ವಸಹಾಯ ಸಂಘಗಳ ಪರಿಕಲ್ಪನೆಯನ್ನು ನೀಡಿ, ಮಹಿಳೆಯರಿಗೆ ಸ್ವ ಉದ್ಯೋಗದ ಬಗ್ಗೆ ಅರಿವನ್ನು ಮೂಡಿಸಿ ಬಂಡವಾಳ, ತರಬೇತಿಯನ್ನು ನೀಡುವ ಮೂಲಕ ಸ್ವಾವಲಂಬಿ ಜೀವನವನ್ನು ನಡೆಸುವುದಕ್ಕೆ ಅಗತ್ಯ ನೆರವನ್ನು ನೀಡುತ್ತಿದ್ದಾರೆ.

ಸಮಾಜದಲ್ಲಿನ ನಿರ್ಗತಿಕರನ್ನು ಗುರುತಿಸಿ ಅಂತಹ 22 ಸಾವಿರ ಜನರಿಗೆ ಪ್ರತಿ ತಿಂಗಳು ಒಂದು ಸಾವಿರ ಮಾಶಸನ ಹಾಗೂ ವಸತಿರಹಿತ ಒಂದು ಸಾವಿರ ಜನರನ್ನು ಗುರುತಿಸಿ ಅಂತಹವರಿಗೆ 1ರಿಂದ 1.5 ಲಕ್ಷವೆಚ್ಚದಲ್ಲಿ ಮನೆಗಳನ್ನು ನಿರ್ಮಾಣ ಮಾಡಿ ನೀಡಲಾಗಿದೆ.

ರಾಜ್ಯದಲ್ಲಿನ ಸ್ವಸಹಾಯ ಸಂಘದ ಸದಸ್ಯರ ಕುಟುಂಬದ 1ಲಕ್ಷ 20 ಸಾವಿರ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕಾಗಿ ಸುಜ್ಞಾನ ನಿಧಿಯಡಿಯಲ್ಲಿ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆ. ರಾಜ್ಯದಲ್ಲಿನ 1 ಸಾವಿರದ 30 ಶಾಲೆಗಳಿಗೆ ಜ್ಞಾನದೀಪಾ ಯೋಜನೆಯಡಿಯಲ್ಲಿ ಶಿಕ್ಷಕರನ್ನು ನೇಮಕ ಮಾಡಿಕೊಡುವುದರ ಜೋತೆಗೆ ಮೂಲಸೌಲಭ್ಯ ಸುಧಾರಣೆಗಾಗಿ ಪಿಠೋಪಕರಣ ಸೇರಿದಂತೆ ಅಗತ್ಯ ಸೌರ್ಯ ಕಲ್ಪಿಸಲಾಗುತ್ತಿದೆ.

ಪುರಸಭೆಗಳ ಸಹಕಾರದಿಂದ ರಾಜ್ಯದಲ್ಲಿ 550 ಶುದ್ಧ ನೀರಿನ ಘಟಕಗಳ ನಿರ್ಮಾಣ ಮಾಡಲಾಗಿದೆ. ರಾಜ್ಯದಲ್ಲಿ ನಮ್ಮ ಊರು ನಮ್ಮ ಕೆರೆ ಯೋಜನೆಯಡಿಯಲ್ಲಿ 6 ಕೋಟಿ ವೆಚ್ಚದಲ್ಲಿ 1050 ಕೆರೆಗಳ ಊಳೆತ್ತುವ ಕಾಮಾಗಾರಿಯನ್ನು ಕೈಗೊಳ್ಳಲಾಗಿದೆ. ರಾಜ್ಯದಲ್ಲಿ 17 ಸಾವಿರ ಪುರತಾನ ದೇವಸ್ಥಾನಗಳ ಜೀರ್ಣೋದರಕ್ಕಾಗಿ ಅಗತ್ಯ ಸಹಾಯಧನ ನೀಡಲಾಗಿದೆ. ಆರೋಗ್ಯ ವಿಮೆ,ಶಿಕ್ಷಣ,ಕೃಷಿಗೆ ಸಂಬಂದಿಸಿದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಕುಟುಂಬ ಹಾಗೂ ಸಮುದಾಯಗಳ ಅಭಿವೃದ್ಧಿಗಾಗಿ ದುಷ್ಚಟ ನಿವಾರಣೆಗಾಗಿ ಮಧ್ಯವರ್ಜನೆ ಶಿಬಿರಗಳನ್ನು ಅಯೋಜಿಸಿ 1ಲಕ್ಷ 70ಸಾವಿರ ಜನರನ್ನು ವ್ಯಾಸನಮುಕ್ತರನ್ನಾಗಿಸಲಾಗಿದೆ. ಎಂದು ತಿಳಿಸಿದರು.

ಜಿಲ್ಲಾ ಜನಜಾಗೃತಿ ಸಮಿತಿಯ ಸದಸ್ಯರಾದ ತಿಪ್ಪಣ್ಣ ಬಾಗಲವಾಡ ವಕೀಲರು ಮಾತನಾಡಿದರು. ಕಾರ್ಯಕ್ರಮದಲ್ಲಿ ಪುರಸಭೆ ಆರೋಗ್ಯ ನಿರೀಕ್ಷಕರಾದ ಮಹೇಶಕುಮಾರ, ಜಿಲ್ಲಾ ನಿರ್ದೇಶಕರಾದ ರಾಘವೇಂದ್ರ ಪಟ್ಟಗಾರ, ತಾ.ಯೋಜನಾಧಿಕಾರಿ ಸುನೀತಾ ಪ್ರಭು, ರವಿಚಂದ್ರ,ಜ್ಯೋತಿ ಪಾಟೀಲ್, ತಾ.ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರಪಾಟೀಲ್, ಸೇರಿದಂತೆ ಇನ್ನಿತರರು ಇದ್ದರು.

# ಗ್ರಾಮೀಣ ಭಾಗದ ಯುವಕರಲ್ಲಿ ಕನ್ನಡ ಜಾಗೃತಿ



ಧೈರ್ಯದ ದಾರಿ

**ಮಾನ್ವಿ** – ಗ್ರಾಮೀಣ ಭಾಗದ ಯುವಕರನ್ನ ಅತಿ ಹೆಚ್ಚು ಕನ್ನಡ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ನಮ್ಮ ಕನ್ನಡದ ಪ್ರೇಮ ಹೆಚ್ಚಿಸಬೇಕು, ನಮ್ಮ ಭಾಷೆಯನ್ನು ನಾವು ಪ್ರೀತಿಸಬೇಕು ದತ್ತಿ ಕಾರ್ಯಕ್ರಮಗಳಿಂದ ಯುಕರಲ್ಲಿ ಕನ್ನಡದ ಜಾಗೃತಿ ಮೂಡಿಸಬೇಕು ಎಂದು ಟಿಎಪಿಸಿಎಂಎಸ್ ಅಧ್ಯಕ್ಷ ತಿಮ್ಮಾರಡ್ಡಿ ಭೋಗಾವತಿ ಹೇಳಿದರು.

ಪಟ್ಟಣದ ಬಾಷುಮೀಯಾ ಸಾಹುಕಾರ ಸರ್ಕಾರಿ ಪದವಿ ಕಾಯೇಜ್‌ನಲ್ಲಿ ಶುಕ್ರವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಮ್ಮ ರಾಜ್ಯದಲ್ಲಿ ಇತರೆ ಅನೇಕ ಅನ್ಯ ಭಾಷೆಗಳನ್ನು ಮಾತನಾಡುವವರಿದ್ದು ಅವರ ಜೊತೆ ಕನ್ನಡ ಮಾತನಾಡುವ ಮೂಲಕ ಅವರನ್ನ ನಮ್ಮ ನೆಲ, ಭಾಷೆ, ಸಂಸ್ಕೃತಿ ಕಡೆ ತರುವ ಪ್ರಯತ್ನ ಮಾಡಬೇಕು ಎಂದರು.

ಕಾಲೇಜ್ ಪ್ರಚಾರ್ಯ ಜೆಎಲ್ ಈರಣ್ಣ ಮಾತನಾಡಿ ಪಠ್ಯಪುಸ್ತಕಗಳ ಜೊತೆಗೆ ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಳ್ಳುವ ದತ್ತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸಾಹಿತ್ಯಿಗಳು ಮಾತನಾಡಿದ್ದು ಕೇಳಿದಾಗ ಪುಸ್ತಕ ಓದಿದಕ್ಕಿಂತ ಹೆಚ್ಚು ಜ್ಞಾನ ಸಿಗುತ್ತದೆ. ನಿಮ್ಮಲ್ಲಿ ಕನ್ನಡದ ಪ್ರೇಮ ಹೆಚ್ಚಾಗುತ್ತದೆ ಎಂದು ಹೇಳಿದರು.

ದಿ.ಬಾಷುಮೀಯಾ ಸಾಹುಕಾರ ದತ್ತಿ ವಿಷಯ ಕೋಮು ಸೌಹಾರ್ದತೆ ಕುರಿತು ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಜಿಷಾನ್‌ಅಖೀಲ್ ಸಿದ್ದಿಕಿ, ದಿ.ಚನ್ನಸಬವಪ್ಪ ಬೆಟ್ಟದೂರು ದತ್ತಿ, ವಿಷಯ ಶರಣ ಸಾಹಿತ್ಯ ಕುರಿತು ಉಪನ್ಯಾಸಕ ಶರಣಬಸವ ಬೆಟ್ಟದೂರು, ದಿ. ರುದ್ರಗೌಡ ಮಾಲೀ ಪಾಟೀಲ್ ದತ್ತಿ ವಿಷಯ ಹಳ್ಳಿಗಳಲ್ಲಿ ಶಿಕ್ಷಣ ಗುಣಮಟ್ಟ ಮತ್ತು ಪ್ರತಿಭೆ ಕುರಿತು ಶಿಕ್ಷಕ ಗೋಪಾಲನಾಯಕ ಜೂಕುರು ಮತ್ತು ದಿ. ಪೀರಮ್ಮ ಪೋತ್ನಾಳ ದತ್ತಿ ವಿಷಯ ತಾಯಿ ಕುರಿತು ಉಪನ್ಯಾಸಕ ಸೈಯ್ಯದ್ ಮೀನಾಜ್ ಉಲ್ ಹಸನ್ ಮಾತನಾಡಿದರು.

ಕಸಾಪ ತಾಲೂಕು ಅಧ್ಯಕ್ಷ ಶರಣಬಸವ ನೀರಮಾನ್ವಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಗುಮ್ಮ ಬಸವರಾಜ ವಕೀಲರು, ಡಾ. ರೋಹಿಣಿ ಮಾನ್ವಿಕರ್, ತಿಪ್ಪಣ್ಣ ಹೊಸಮನಿ, ಮುಕಪ್ಪ ಕಟ್ಟಿಮನಿ, ದತ್ತಿ ದಾನಿಗಳಾದ ದತ್ತಿ ದಾನಿಗಳಾದ ನಾಗರತ್ನಮ್ಮ ಪಾಟೀಲ್ ಬೆಟ್ಟದೂರು, ಹೆಚ್. ಶರ್ಫುದ್ದಿನ್ ಪೋತ್ನಾಳ, ಚನ್ನಪ್ಪಗೌಡ ಪಾಟೀಲ್ ಉಮಳಿಹೊಸೂರು, ಕಸಾಪ ಹೋಬಳಿ ಘಟಕದ ಅಧ್ಯಕ್ಷ ಹನುಮಂತಪ್ಪ ಕೊಟ್ನೆಕಲ್, ಕಸಾಪ ಗೌರವ ಕಾರ್ಯದರ್ಶಿ ಲಕ್ಷಣ ಜಾನೇಕಲ್, ಸಂಘಟನಾ ಕಾರ್ಯದರ್ಶಿ ಚನ್ನಬಸವ ಮಾಡಗಿರಿ, ಪದವಿ ಕಾಲೇಜ್ ಉಪನ್ಯಾಸಕರು ಇನ್ನಿತರರು ಇದ್ದರು.

# ರಾಯಚೂರು ಜಿಲ್ಲೆಯ 250 ಗ್ರಾಮಗಳಲ್ಲೂ ಬಾಲ್ಯ ವಿವಾಹಗಳು ಸಂಪೂರ್ಣ ನಿಲ್ಲಬೇಕು

ಧೈರ್ಯದ ದಾರಿ

**ರಾಯಚೂರು:**ರಾಯಚೂರು ಜಿಲ್ಲೆಯ 250 ಗ್ರಾಮಗಳಲ್ಲೂ ಬಾಲ್ಯ ವಿವಾಹಗಳು ಸಂಪೂರ್ಣ ನಿಲ್ಲಬೇಕು. ಹೆಚ್ಚಾಗಿ ಸಾಮೂಹಿಕ ವಿವಾಹ ಸಂದರ್ಭದಲ್ಲಿಯೇ ಚೈಲ್ಡ್ ಮ್ಯಾರೇಜ್‌ಗಳು ನಡೆಯುವ ಸಾಧ್ಯತೆ ಇದ್ದು, ಈ ಬಗ್ಗೆ ವಿಶೇಷ ನಿಗಾವಹಿಸಬೇಕು. ಇನ್ಮುಂದೆ ಯಾವುದೇ ಕಡೆಗಳಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ಎಚ್ಚರಿಕೆ ವಹಿಸಿ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಮಾರ್ಚ 27ರಂದು ನಡೆದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ಅನಿಷ್ಠ ಪದ್ಧತಿಯಾಗಿದೆ. ಜನರಲ್ಲಿ ಜಾಗೃತಿಯ ಕೊರತೆಯಿಂದಾಗಿಯೂ ಬಾಲ್ಯ ವಿವಾಹಗಳು ನಡೆಯುತ್ತವೆ. ಈ ಬಗ್ಗೆ ಜನತೆಗೆ ನಿರಂತರವಾಗಿ ಅರಿವು ಮೂಡಿಸುವುದರ ಜೊತೆಗೆ ಯಾವುದೇ ಕಡೆಗಳಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ನೋಡಿಕೊಳ್ಳುವುದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ. ರಾಯಚೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆಗೆ ಏನು ಮಾಡಬಹುದು ಎಂಬುದರ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕೂಡಲೇ ಕ್ರಿಯಾಯೋಜನೆ ಸಿದ್ಧಪಡಿಸಿ ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ರಾಯಚೂರು, ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರ, ಸಿರವಾರ, ಅರಕೇರಾ ಮತ್ತು ದೇವದುರ್ಗ ಸೇರಿದಂತೆ ಇನ್ನೀತರ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸೇರಿದಂತೆ ಎಲ್ಲ ಅಧಿಕಾರಿಗಳು ಒಗ್ಗೂಡಿ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಬಾಲ್ಯ ವಿವಾಹಗಳು ಯಾವ ಕಡೆಗಳಲ್ಲಿ ಹೆಚ್ಚಾಗಿ ನಡೆಯಬಹುದು ಎಂಬುದರ ಬಗ್ಗೆ ಅರಿಯಬೇಕು. ಬಾಲ್ಯ ವಿವಾಹವಾಗುತ್ತಿರುವ ಬಗ್ಗೆ ಮಾಹಿತಿ ಬಂದ ಕೂಡಲೇ ಅಧಿಕಾರಿಗಳು ಜಾಗೃತರಾಗಿ ಸ್ಥಳಕ್ಕೆ ದಾವಿಸಿ ಬಾಲ್ಯ ವಿವಾಹ ನಿಲ್ಲಿಸಿ, ಬಾಲ್ಯವಿವಾಹ ತಡೆ ಕಾಯ್ದೆಯಡಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ಬಾಲ್ಯವಿವಾಹಕ್ಕೆ ಸಹಕರಿಸಿದ, ಪ್ರೇರೇಪಿಸಿದವರ ಮೇಲೆ ಯಾವುದೇ ಮುಲಾಜಿಲ್ಲದೇ ಕ್ರಮ ವಹಿಸಬೇಕು. ಎಫ್‌ಐಆರ್ ದಾಖಲಿಸಿ ಬಿಸಿ ಮುಟ್ಟಿಸಬೇಕು ಎಂದು ಜಿಲ್ಲಾಧಿಕಾರಿಗಳು ಆದೇಶಿಸಿದರು.

ಜಿಲ್ಲೆಯಲ್ಲಿ ದಾಖಲಾದ ಪೋಕ್ಸೊ ಪ್ರಕರಣಗಳ ಬಗ್ಗೆ ತಾಲೂಕುವಾರು ಮಾಹಿತಿ ನೀಡಬೇಕು. ಇದುವರೆಗೆ ದಾಖಲಾದ ಪ್ರಕರಣಗಳೆಷ್ಟು? ಆಯಾ ಪ್ರಕರಣಗಳಡಿ ಯಾವ ಕ್ರಮವಾಗಿದೆ? ಎಂಬುವುದರ ಬಗ್ಗೆ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಬಾಲ ಗರ್ಭಿಣಿಯರ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಆರೋಗ್ಯ ಇಲಾಖೆಯು ತಿಂಗಳುವಾರು ದತ್ತಾಂಶಗಳನ್ನು ಜಿಲ್ಲಾಡಳಿತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಒದಗಿಸಬೇಕು. ಇದರಿಂದಾಗಿ ಜನಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ ಎಂದರು.

ನೋಡಲ್ ಅಧಿಕಾರಿಗಳ ನೇಮಿಸಿ: ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ತಡೆಗೆ ಸಂಬಂಧಿಸಿದಂತೆ ಅಗತ್ಯ ಕ್ರಮಕ್ಕಾಗಿ ಜಿಲ್ಲೆಯ ಪ್ರತಿಯೊಂದು ತಾಲೂಕಿನಲ್ಲಿ ತಾಲೂಕು ಮಟ್ಟದ ಅಧಿಕಾರಿ ಒಬ್ಬರನ್ನು ನೋಡಲ್ ಅಧಿಕಾರಿಯಾಗಿ ನೇಮಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಬಾಲ್ಯ ವಿವಾಹ ತಡೆ ಕುರಿತು ಶಾಲಾ–ಕಾಲೇಜುಗಳಲ್ಲಿ ಜಾಗೃತಿ





ಕಾರ್ಯಕ್ರಮ ರೂಪಿಸಬೇಕು. ಬಾಲ್ಯ ವಿವಾಹ ಅಪರಾಧ ಎಂದು ಜನತೆಗೆ ತಿಳಿಸಿ ಅರಿವು ಮೂಡಿಸಬೇಕು ಎಂದು ಸೂಚನೆ ನೀಡಿದರು.

ಪೋಷಣ್ ಅಭಿಯಾನ ಯೋಜನೆಯಡಿ ಒಟ್ಟು 2,27,515 ಫಲಾನುಭವಿಗಳು ನೋಂದಣಿಯಾಗಿದ್ದು, ಶೇಕಡಾ 100 ರಷ್ಟು ಫಲಾನುಭವಿಗಳ ಆಧಾರ್ ಪರಿಶೀಲಿಸಲಾಗಿದೆ. ಶೇಕಡಾ 99.59 ರಷ್ಟು ಫಲಾನುಭವಿಗಳ ಮೊಬೈಲ್ ವೆರಿಫಿಕೇಶನ್ ಮುಗಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 2856 ಅಂಗನವಾಡಿಗಳ ಪೈಕಿ 1940 ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಣೆ ಮಾಡುತ್ತಿವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್‌ಕುಮಾರ ಅವರು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾಧಿಕಾರಿಗಳು, ಜಿಪಂ ಸಿಇಓ ಕಾರ್ಯಕ್ಕೆ ಮೆಚ್ಚುಗೆ: ರಾಯಚೂರು ಜಿಲ್ಲೆಯಲ್ಲಿ ಮಹಿಳಾ ಸ್ವಸಹಾಯ ಸಂಘಗಳ ವಿವಿಧ ಚಟುವಟಿಕೆಗಳ ಕಾರ್ಯರೂಪಕ್ಕೆ ತಂದು ಮಹಿಳಾ ಸಬಲೀಕರಣಕ್ಕೆ ಆದ್ಯತೆ ನೀಡುತ್ತಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಮತ್ತು ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಇದೆ ವೇಳೆ ಸ್ತ್ರೀ 2ನೇಪುಟಕ್ಕೆ

ಮೊದಲನೇ ಪುಟದಿಂದ

# ತೈಲ ಅಬಕಾರಿ ಸುಂಕ ಕಡಿತ ಮಾಡಿದ ಕೇಂದ್ರ ಸರ್ಕಾರ

ಸಂಗ್ರಹ ಮತ್ತು 30 ದಿನಗಳ ಎಲ್‌ಪಿಜಿ ಸಂಗ್ರಹ ಲಭ್ಯವಿದೆ ಎಂದು ತಿಳಿಸಿದೆ.ಇದಲ್ಲದೆ, ಭಾರತ ತೈಲ ಮತ್ತು ಎಲ್‌ಪಿಜಿ ಆಮದುಗಳನ್ನು ವಿಭಿನ್ನ ದೇಶಗಳಿಂದ ಹೆಚ್ಚಿಸಲು ಒಪ್ಪಂದಗಳನ್ನು ವೇಗಗೊಳಿಸಿದೆ. ಒಟ್ಟು ತೈಲ ಸಂಗ್ರಹವು 74 ದಿನಗಳಿಗೆ ಸಾಕಾಗುವಷ್ಟು ಇದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

**ಲಾಕ್‌ಡೌನ್ ಪ್ರಸ್ತಾಪವಿಲ್ಲ: ಹರ್‌ದೀಪ್ ಸಿಂಗ್'**

ದೇಶದಲ್ಲಿ ಎಲ್‌ಪಿಜಿ ಕೊರತೆಯಾಗಿರುವುದರಿಂದ ಲಾಕ್‌ಡೌನ್ ಜಾರಿಯಾಗಲಿದೆ ಎಂಬ ವರದಿಗಳನ್ನು ತಳ್ಳಿ ಹಾಕಿರುವ ಕೇಂದ್ರದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರ್‌ದೀಪ್ ಸಿಂಗ್ ಪುರಿ ದೇಶದಲ್ಲಿ ಲಾಕ್‌ಡೌನ್ ಜಾರಿಯಾಗಲಿದೆ ಎಂಬುದು ಶುದ್ಧ ಸುಳ್ಳು. ಅಂತಹ ಯಾವುದೇ ಪ್ರಸ್ತಾವನೆಗಳು ಕೇಂದ್ರ ಸರ್ಕಾರದ ಮುಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.'

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ತೈಲ, ಇಂಧನ ಹಾಗೂ ಇತರ ಅಗತ್ಯ ಸರಕುಗಳ ಸರಬರಾಜನ್ನು ಖಾತ್ರಿಪಡಿಸಿಕೊಳ್ಳಲು ಪ್ರಧಾನಿ ಮೋದಿ ಅವರ ನಾಯಕತ್ವದಲ್ಲಿ ಅಗತ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಯಾವುದೇ ಸವಾಲುಗಳನ್ನು ಎದುರಿಸಲು ಸಂಪೂರ್ಣ ಸಜ್ಜಾಗಿದ್ದೇವೆ ಎಂದಿದ್ದಾರೆ.

ಇಂತಹ ಜಾಗತಿಕ ಅನಿಶ್ಚಿತತೆ ಎದುರಾದಾಗ ಭಾರತ ಈ ಹಿಂದೆಯೂ ಪುಟಿದೇಳುವ ಸಾಮರ್ಥ್ಯವನ್ನು ಪ್ರದರ್ಶಿಸಿದೆ. ಅದೇ ರೀತಿ ಅಗತ್ಯಕ್ಕೆ ತಕ್ಕಂತೆ ಪೂರ್ವ ಸಿದ್ಧತೆ ಮತ್ತು ಸಂಘಟನಾತ್ಮಕವಾಗಿ ಭಾರತ ಕಾರ್ಯನಿರ್ವಹಿಸುವುದನ್ನು ಮುಂದುವರೆಸುತ್ತದೆ ಎಂದು ಅವರು ತಿಳಿಸಿದ್ದಾರೆ.ಇಂತಹ ಸಂದರ್ಭದಲ್ಲಿ ಬೇಜವಾಬ್ದಾರಿ ಹಾಗೂ ಸಮಸ್ಯೆ ಸೃಷ್ಟಿಸುವಂತಹ ವದಂತಿಗಳನ್ನುಯಾರೂ ಹರಡಬಾರದು. ಕೇಂದ್ರ ಸಚಿವರು ಹರ್‌ದೀಪ್ ಸಿಂಗ್ ಪುರಿ ಲಾಕ್‌ಡೌನ್ ಪ್ರಶ್ನೆಯೇ ಇಲ್ಲ ಎಂದಿದ್ದಾರೆ. ಲಾಕ್ ಡೌನ್ ಪ್ರಶ್ನೆಯೇ ಇಲ್ಲ ಎಂದು ಪುನರುಚ್ಚರಿಸಿದರು.

**ರಾಜ್ಯದಲ್ಲೂ ತೈಲ ಸುಂಕ ಇಳಿಕೆ ಸುಳಿವು**

ರಾಜ್ಯದಲ್ಲೂ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಸುಂಕವನ್ನು ಕಡಿಮೆ ಮಾಡುವ ಸುಳಿವನ್ನ ಗೃಹ ಸಚಿವ ಡಾಕ್ಟರ್ ಜಿ ಪರಮೇಶ್ವರ್ ನೀಡಿದ್ದಾರೆ ಕೇಂದ್ರ ಸರ್ಕಾರ ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ಅಬಕಾರಿ ಸುಂಕ ಇಳಿಸಿದ ವಿಚಾರಕ್ಕೆ ಸಂಬಂಧಪಟ್ಟಂತೆ ರಾಜ್ಯದಲ್ಲೂ ಸುಂಕ ಇಳಿಸುತ್ತೀರಾ ಅಂದ್ರೆ ಪ್ರಶ್ನೆಗೆ ಈ ಬಗ್ಗೆ ಸಿದ್ದರಾಮಯ್ಯ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು ಪೆಟ್ರೋಲ್ ಡೀಸೆಲ್ ಮೇಲಿನ ಸುಂಕ ಕಡಿತ ಮಾಡುವ ಬಗ್ಗೆ ಸಚಿವ ಸಂಪುಟದಲ್ಲಿ ಅಗತ್ಯ ಬಿದ್ದರೆ ಚರ್ಚೆ ಚರ್ಚೆ ಮಾಡುತ್ತೇವೆ ಅಂತಿಮವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಬಗ್ಗೆ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಹೇಳಿದರು.

# ರಾಯಚೂರು ಜಿಲ್ಲೆಯ 250 ಗ್ರಾಮಗಳಲ್ಲೂ ಬಾಲ್ಯ ವಿವಾಹಗಳು ಸಂಪೂರ್ಣ ನಿಲ್ಲಬೇಕು

ಶಕ್ತಿ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಶ್ರೀದೇವಿ ಶ್ರೀನಿವಾಸ ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ಜಿಲ್ಲಾ ಮಕ್ಕಳ ರಕ್ಷಣ ಘಟಕದ ರಕ್ಷಣಾಧಿಕಾರಿ ಮನ್ಸೂರ್ ಅಹಮದ್ ಸೇರಿದಂತೆ ಸಂಕಲ್ಪ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಮತ್ತು ವಿವಿಧ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಭೆಯಲ್ಲಿ ಇದ್ದರು.

# ಇತಿಹಾಸದ ಪುಟಗಳಲ್ಲಿ ಮರೆಯಾದ ಸ್ವಾತಂತ್ರ್ಯ ಸೇನಾನಿ ಪದ್ಮಾವತಿ ಬಾಯಿ ಗುರುತಿಗೆ ಒತ್ತಾಯ



**ಜಮಖಂಡಿ :ಮಾ.27:**ಇತಿಹಾಸದ ಪುಟಗಳಲ್ಲಿ ಪ್ರಮುಖ ಸ್ಥಾನ ಪಡೆಯಬೇಕಿದ್ದ ಜಮಖಂಡಿಯ ಸ್ವಾತಂತ್ರ್ಯ ಸೇನಾನಿ ಪದ್ಮಾವತಿ ಬಾಯಿ ಅವರು ಗೌರವದಿಂದ ವಂಚಿತರಾಗಿದ್ದಾರೆ ಎಂದು ಹಿರಿಯ ನ್ಯಾಯವಾದಿ ತಾತಾ ಸಾಹೇಬ್ ಬಾಂಗಿ ಅಭಿಪ್ರಾಯಪಟ್ಟರು.

ನಗರದ ದಾನಾಮ್ಮಾ ದೇವಿ ದೇವಸ್ಥಾನದ ಸಭಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ವಿಶೇಷವಾಗಿ ಜಮಖಂಡಿಯವರಾದ ಪದ್ಮಾವತಿ ಬಾಯಿ ದೇಸಾಯಿ ಅವರು ದೇಶದ ಸ್ವಾತಂತ್ರ್ಯಕ್ಕಾಗಿ ಮೌನಕ್ರಾಂತಿ ನಡೆಸಿ, ಜೀವನಪೂರ್ತಿ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು. ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿ ಜೈಲು ಶಿಕ್ಷೆ ಅನುಭವಿಸಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ಜಮಖಂಡಿ ಸಂಸ್ಥಾನದ ಸಭೆಯ ಸದಸ್ಯೆಯಾಗಿದ್ದು, ಸಾಮಾಜಿಕ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನ ಸೆಳೆದ ಏಕೈಕ ಮಹಿಳಾ ಶಾಸಕಿ ಎಂಬುದು ಗಮನಾರ್ಹ ಸಂಗತಿ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಸಂತೋಷ ತಳಕೇರಿ ಮಾತನಾಡಿ, ಈ ಮಹಾನ್ ಸೇನಾನಿಯ ಸಾಧನೆಗಳನ್ನು ಜನತೆಗೆ ಪರಿಚಯಿಸುವ ಕಾರ್ಯವನ್ನು ಡಾ. ತಾತಾ ಸಾಹೇಬ್ ಬಾಂಗಿ ಅವರು ಮಾಡಿದ್ದಾರೆ. "ಸ್ವಾತಂತ್ರ್ಯ ಸೇನಾನಿ ಪದ್ಮಾವತಿ ಬಾಯಿ ವಾಮನಾರಾಯ ದೇಸಾಯಿ (ಬಿದರಿ)" ಎಂಬ ಸಂಶೋಧನಾ ಕೃತಿಯನ್ನು ಪ್ರಕಟಿಸುವ ಮೂಲಕ ಅವರ ಹೋರಾಟದ ಬದುಕಿನ ಮೇಲೆ ಬೆಳಕು ಚೆಲ್ಲಲಾಗಿದೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಮಾರ್ಚ್ 29 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಬಸವ ಭವನದಲ್ಲಿ ಕೃತಿ ಬಿಡುಗಡೆ ಸಮಾರಂಭವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಜಮಖಂಡಿಯ ಮೂಲ ಸಿದ್ದೇಶ್ವರ ಸಿದ್ಧಕ್ಷೇತ್ರದ ಪೂಜ್ಯ ಶ್ರೀ ಸಿದ್ದಮುತ್ಯಾ ದಿವ್ಯಸಾನಿಧ್ಯ ವಹಿಸಲಿದ್ದು, ಉದ್ಘಾಟಕರಾಗಿ ಮನೋಜ ಪಾಟೀಲ (ಪದ್ಮಾವತಿ ಬಾಯಿ ಅವರ ಮೊಮ್ಮಗ) ಭಾಗವಹಿಸಲಿದ್ದಾರೆ. ಕೃತಿ ಲೋಕಾರ್ಪಣೆಯನ್ನು ಪ್ರೊ. ಮೀನಾ ಚಂದಾವರಕರ (ವಿಶ್ರಾಂತ ಕುಲಪತಿ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ) ನೆರವೇರಿಸಲಿದ್ದಾರೆ. ಡಾ. ವಾಯ್.ಎಂ. ಯಾಕೊಳ್ಳಿ ಕೃತಿ ಪರಿಚಯ ಮಾಡಿಕೊಡಲಿದ್ದು, ನಾಡಿನ ಹಲವಾರು ಸಾಹಿತಿಗಳು ಮತ್ತು ಹೋರಾಟಗಾರರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಸಂದರ್ಭದಲ್ಲಿ ಪದ್ಮಾವತಿ ಬಾಯಿ ಅಭಿಮಾನಿ ಬಳಗದ ಅಧ್ಯಕ್ಷ ಕ್ಯಾಪ್ಟನ್ ಗಿರಮಲ್ಲಪ್ಪ ಹಂಚಿನಾಳ, ಬಸವರಾಜ ನಾಗಮೊತಿ, ಶ್ರೀಪಾದ ಹೊನವಾಡ, ಶಿವಾನಂದ ಸಾತ್ಯಾಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಪರವಾನಗಿ ಭೂಮಾಪಕರ ಲಾಗಿನ್ ಬಂದ್: ಅನ್ನದಾತರ ನಿತ್ಯ ಪರದಾಟ : ನಾರಾಯಣ್ಣೊರ್ ಆಕ್ರೋಶ

**ಯಾದಗಿರಿ:ಮಾ.27:** ಪರವಾನಗಿ ಭೂಮಾಪಕರಿಂದ ಕಳೆದ ಒಂದು ತಿಂಗಳಿನಿಂದ ನಡೆಯುತ್ತಿರುವ ಲಾಗಿನ್ ಬಂದ್ ಪ್ರತಿಭಟನೆಯ ಪರಿಣಾಮವಾಗಿ ಜಿಲ್ಲೆಯ ರೈತರು ಭೂಸಂಬಂಧಿತ ಕಾರ್ಯಗಳಿಗೆ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಈ ಪರಿಸ್ಥಿತಿಯನ್ನು ತಕ್ಷಣ ಸರಿಪಡಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಕಾರ್ಮಿಕ ಸೇನೆ ಜಿಲ್ಲಾಧ್ಯಕ್ಷ ಪೊಲಪ್ಪ ಎಂ. ನಾರಾಯಣ್ಣೊರ್ ತೀವ್ರ ಆಗ್ರಹ ವ್ಯಕ್ತಪಡಿಸಿದ್ದಾರೆ.ಗುರುವಾರ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, "ಭೂ ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುವ ಎಲ್ಲಾ ಜಮೀನಿನ ವ್ಯವಹಾರಗಳು ಸಂಪೂರ್ಣವಾಗಿ ಲಾಗಿನ್ ವ್ಯವಸ್ಥೆಯ ಮೇಲೆ ಅವಲಂಬಿತವಾಗಿವೆ. ಆದರೆ, ಪರವಾನಗಿ ಭೂಮಾಪಕರ ಬೇಡಿಕೆ ಈಡೇರಿಸದ ಹಿನ್ನೆಲೆಯಲ್ಲಿ ಲಾಗಿನ್ ಸೇವೆ ಸ್ಥಗಿತಗೊಂಡಿದ್ದು, ಇದರ ನೇರ ಪರಿಣಾಮ ರೈತರ ಮೇಲೆ ಬಿದ್ದಿದೆ" ಎಂದು ತಿಳಿಸಿದ್ದಾರೆ.



ಜಿಲ್ಲೆಯ ವಿವಿಧ ಹಳ್ಳಿಗಳಿಂದ ದಿನಂಪ್ರತಿ ರೈತರು ತಮ್ಮ ಜಮೀನಿನ ದಾಖಲೆಗಳು, ಹಕ್ಕುಪತ್ರ, ಮ್ಯೂಟೇಷನ್ ಸೇರಿದಂತೆ ವಿವಿಧ ಕಾರ್ಯಗಳಿಗಾಗಿ ಜಿಲ್ಲಾ ಕೇಂದ್ರಕ್ಕೆ ಬಂದು, ಕೆಲಸಗಳಾಗದೆ ಬೇಸತ್ತು ಹಿಂತಿರುಗುತ್ತಿರುವುದು ಸಾಮಾನ್ಯವಾಗಿದೆ. ಭೀಕರ ಬಿಸಿಲನ್ನೂ ಲೆಕ್ಕಿಸದೆ ಓಡಾಡುತ್ತಿರುವ ರೈತರ ಪರದಾಟ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.

"ಇಂತಹ ಪರಿಸ್ಥಿತಿಯಲ್ಲಿ ರೈತರು ಅನುಭವಿಸುತ್ತಿರುವ ತೊಂದರೆ ಅನ್ಯಾಯಕರವಾಗಿದೆ. ರೈತರ ತಿರುಗಾಟಕ್ಕೆ ತಕ್ಷಣ ಅಂತ್ಯವಾಗಬೇಕು. ಸಂಬಂಧಪಟ್ಟ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಒಂದು ವಾರದೊಳಗೆ ಲಾಗಿನ್ ಸೇವೆ ಪುನರಾರಂಭ ಮಾಡಬೇಕು" ಎಂದು ನಾರಾಯಣ್ಣೊರ್ ಒತ್ತಾಯಿಸಿದ್ದಾರೆ.

ಇಲ್ಲವಾದಲ್ಲಿ, ಜಿಲ್ಲಾಧಿಕಾರಿ ಕಚೇರಿ ಮುಂದೆ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದು, ಸರ್ಕಾರ ಹಾಗೂ ಸಂಬಂಧಿತ ಅಧಿಕಾರಿಗಳು ಶೀಘ್ರ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.

# ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್, ಡೀಸೆಲ್‌ಗೆ ಯಾವುದೇ ಕೊರತೆಯಿಲ್ಲ: ನಿತೀಶ್ ಕೆ

ಧೈರ್ಯದ ದಾರಿ



**ರಾಯಚೂರು:** ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡಿಸೆಲ್ ಕೊರತೆಯಿಲ್ಲ ಮತ್ತು ಬೇಡಿಕೆಯನ್ನು ಪೂರೈಸಲು ಸಾಕಷ್ಟು ಸರಬರಾಜು ಲಭ್ಯವಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯಲ್ಲಿ ಕಳೆದೆರಡು ದಿನಗಳಿಂದ ಪೆಟ್ರೋಲ್ ಪಂಪ್‌ಗಳಲ್ಲಿ ಅಸಾಮಾನ್ಯ ಜನದಟ್ಟಣೆ ಕಂಡುಬಂದಿದ್ದು, ನಾಗರಿಕರು ಪೆಟ್ರೋಲ್ ಹಾಗೂ ಡೀಸೆಲ್ ಖರೀದಿಯಲ್ಲಿ ಆತಂಕಗೊಂಡಿದ್ದಾರೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತವು ರಾಯಚೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಷ್ಟ್ರೀಯ ತೈಲ ಕಂಪನಿಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಅವರ ಮಾಹಿತಿಯ ಆಧಾರದ ಮೇಲೆ ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಯಾವುದೇ ಕೊರತೆಯಿಲ್ಲ ಮತ್ತು ಬೇಡಿಕೆಯನ್ನು ಪೂರೈಸಲು ಸಾಕಷ್ಟು ಸರಬರಾಜು ಲಭ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ನಾಗರಿಕರು ಭಯಭೀತಿಯಿಂದ ಖರೀದಿಯಲ್ಲಿ ತೊಡಗಬೇಡಿ ಎಂದು ವಿನಂತಿಸಲಾಗಿದೆ. ಏಕೆಂದರೆ ಅಂತಹ ಕ್ರಮಗಳು ಅನಗತ್ಯ ಅನಾನುಕೂಲತೆ ಉಂಟುಮಾಡಬಹುದು ಮತ್ತು ಸಾಮಾನ್ಯ ಪೂರೈಕೆ ಕಾರ್ಯ ವಿಧಾನಗಳನ್ನು ಅಡ್ಡಿಪಡಿಸಬಹುದು. ಮುಂದುವರೆದು ಪೆಟ್ರೋಲಿಯಂ ಕಾಯ್ದೆ 1934 ಮತ್ತು ಪೆಟ್ರೋಲಿಯಂ ನಿಯಮಗಳು, 2002 ಕ್ಲಾಜ್(5) ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಪೆಟ್ರೋಲ್ ಮಾರಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಇದರಿಂದ ಗಂಭೀರ ಸುರಕ್ಷತಾ ಅಪಘಾತಗಳನ್ನುಂಟು ಮಾಡುತ್ತದೆ. ರಾಯಚೂರು ಜಿಲ್ಲೆಯ ಎಲ್ಲಾ ಪೆಟ್ರೋಲ್ ಪಂಪ್ ಮಾಲೀಕರಿಗೆ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ, ಕ್ಯಾನ್, ಬ್ಯಾರಲ್‌ಗಳಲ್ಲಿ ಪೆಟ್ರೋಲ್ ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಯಾವುದೇ ರೀತಿಯ ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು.

ಪೆಟ್ರೋಲ್ ಪಂಪ್‌ಗಳಲ್ಲಿ ಶಿಸ್ತು ಮತ್ತು ಸೌಹಾರ್ದಯುತ ನಡವಳಿಕೆಯನ್ನು ಕಾಪಾಡಿಕೊಳ್ಳಲು ಮತ್ತು ಪಂಪ್ ಸಿಬ್ಬಂದಿ ಹಾಗೂ ಸಹ ನಾಗರಿಕರೊಂದಿಗೆ ಮತ್ತು ಅಗತ್ಯ ಸೇವೆಗಳ ಸುಗಮ ಕಾರ್ಯನಿರ್ವಹಣೆಯಲ್ಲಿ ಎಲ್ಲಾ ಸಾರ್ವಜನಿಕರ ಸಹಕಾರವನ್ನು ಕೋರಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಎಸ್ಸೆಸ್ಸೆಲ್ಸಿ ತೃತೀಯ ಭಾಷೆ ಪರೀಕ್ಷೆ ಮಾರ್ಚ್ 31ಕ್ಕೆ ಮುಂದೂಡಿಕೆ

**ರಾಯಚೂರು:** ಪ್ರಸ್ತುತ ನಡೆಯುತ್ತಿರುವ 2026ರ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರ ಮಾರ್ಚ್ 30ರಂದು ನಡೆಯಬೇಕಿದ್ದ ತೃತೀಯ ಭಾಷೆ ಪರೀಕ್ಷೆಯನ್ನು ಮಾರ್ಚ್ 31ರ ಮಂಗಳವಾರಕ್ಕೆ ಮುಂದೂಡಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ನ್ನು ದಿನಾಂಕ: 18.03.2026 ರಿಂದ 02.04.2026ರವರೆಗೆ ನಡೆಸಲು ಮಂಡಳಿಯಿಂದ ದಿನಾಂಕ: 04.11.2025ರಂದು ಅಂತಿಮ ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು. ಅದರಂತೆ ಈಗಾಗಲೇ ಪರೀಕ್ಷೆಯು ಪ್ರಾರಂಭವಾಗಿರುತ್ತದೆ. ಈ ವೇಳಾಪಟ್ಟಿಯನ್ವಯ ತೃತೀಯ ಭಾಷೆ ಪರೀಕ್ಷೆಯನ್ನು ದಿನಾಂಕ: 30.03.2026ರಂದು ನಿಗಧಿಪಡಿಸಲಾಗಿತ್ತು. ಆದರೆ, ಸರ್ಕಾರದ ಅಧಿಸೂಚನೆಯನ್ವಯ ಮಹಾವೀರ ಜಯಂತಿ ಪ್ರಯುಕ್ತ ಘೋಷಿಸಲಾಗಿರುವ ಸಾರ್ವತ್ರಿಕ ರಜಾ ದಿನವನ್ನು ದಿನಾಂಕ: 31.03.2026ರ ಮಂಗಳವಾರ ಬದಲಾಗಿ ದಿನಾಂಕ: 30.03.2026ರ ಸೋಮವಾರ ದಂದು ಸಾರ್ವತ್ರಿಕ ರಜಾ ದಿನವೆಂದು ಮಾರ್ಪಡಿಸಿ ಆದೇಶಿಸಲಾಗಿದೆ. ಈ ಸಂಬಂಧ ಅಧ್ಯಕ್ಷರು ಕರ್ನಾಟಕ ಪರೀಕ್ಷಾ ಮತ್ತು ಮೌಲ್ಯ ನಿರ್ಣಯ ಮಂಡಳಿ ಬೆಂಗಳೂರು ಇವರ ಸುತ್ತೋಲೆ ದಿನಾಂಕ 26-03-2026ರನ್ವಯ ದಿನಾಂಕ 30.03.2026ರಂದು ನಿಗಧಿಪಡಿಸಲಾಗಿದ್ದ ಎಸ್ಸೆಸ್ಸೆಲ್ಸಿ ತೃತೀಯ ಭಾಷೆ ವಿಷಯದ ಪರೀಕ್ಷೆಯನ್ನು ದಿನಾಂಕ 31.03.2026ರ ಮಂಗಳವಾರದಂದು ಈಗಾಗಲೇ ನಿಗದಿಪಡಿಸಿರುವ ಅವಧಿಯಲ್ಲಿ ನಡೆಸಲಾಗುವುದು. ಉಳಿದ ವಿಷಯದ ಪರೀಕ್ಷೆಗಳು ವೇಳಾಪಟ್ಟಿಯಂತೆ ಯಥಾವತ್ತಾಗಿ ನಡೆಯಲಿವೆ ಎಂದು ಶಾಲಾ ಶಿಕ್ಷಣ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಹಿಂದೂಪರ ಸಂಘಟನೆಗಳ ವತಿಯಿಂದ ಪಟ್ಟಣದಲ್ಲಿ ವೈಭವದ ಶ್ರೀರಾಮನವಮಿ ಆಚರಣೆ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಬಸವ ವೃತ್ತದಲ್ಲಿ ಹಿಂದೂಪರ ಸಂಘಟನೆಗಳ ವತಿಯಿಂದ ನಡೆದ ಶ್ರೀರಾಮನವಮಿ ಕಾರ್ಯಕ್ರಮದಲ್ಲಿ ಶ್ರೀರಾಮದೇವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಕಲ್ಮಠ ಶ್ರೀ ವಿರೂಪಾಕ್ಷ ಶಿವಾಚಾರ್ಯಮಹಾಸ್ವಾಮಿಗಳು ಆರ್ಶೀವಾಚನ ನೀಡಿ ಅಯೋಧ್ಯ ಪುರುಷ ಶ್ರೀರಾಮಚಂದ್ರ ಪ್ರಭುವಿನ ಅದರ್ಶವನ್ನು ಪ್ರತಿಯೊಬ್ಬರು ಕೂಡ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶ್ರೀರಾಮರಾಜ್ಯದ ಕಲ್ಪನೆ ನೆರವೇರಲಿ ಎಂದು ತಿಳಿಸಿದರು.

ಸಾರ್ವಜನಿಕರಿಗೆ ಪಾನಕ ಹಾಗೂ ಮಜ್ಜಿಗೆಯನ್ನು ವಿತರಿಸಲಾಯಿತು. ವಿಶ್ವಹಿಂದೂ ಪರಿಷತ್ ತಾ.ಅಧ್ಯಕ್ಷ ವಿಜಯೇಂದ್ರ ಇಭ್ರಮಾಪುರ್. ತಾ. ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹಾರಪಾಟೀಲ್ ಬಿ.ಜೆಪಿ,ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ, ಅಖೀಲಭಾರತ ವೀರಶೈವ ಲಿಂಗಾಯತ ಮಹಾಸಭಾ ತಾ,ಅಧ್ಯಕ್ಷರಾದ ಅರಣುಕುಮಾರಚಂ ದಾ.ಶ್ರೀ ನಗರೇಶ್ವರ ರ‍್ಯವೈಶ್ಯಸಮಾಜದ ತಾ.ಅಧ್ಯಕ್ಷರಾದ ಮುತ್ತುರಾಜ್ ಶೆಟ್ಟಿ, ಸುರೇಶನಾಡಗೌಡ, ವೀರೇಶನಾಯಕ ಬೆಟ್ಟದೂರು, ಮೌನೇಶ,ಸಂಗಮೇಶಗೌಡ, ರಾಜಶೇಖರಸ್ವಾಮಿ, ಪ್ರವೀಣ್ ಸ್ವಾಮಿ ಸೇರಿದಂತೆ ಇನ್ನಿತರರು ಇದ್ದರು.

# ಬೃಹತ್ ಮೊಸಳೆ ಪ್ರತ್ಯಕ್ಷ : ಅರಣ್ಯ ಇಲಾಖೆಯಿಂದ ಸುರಕ್ಷಿತವಾಗಿ ಸೆರೆ



**ಜಮಖಂಡಿ: ಮಾ.27:**ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಲಿಂಗನೂರು ಗ್ರಾಮದಲ್ಲಿ ಬೃಹತ್ ಮೊಸಳೆಯೊಂದು ಪ್ರತ್ಯಕ್ಷವಾಗಿ ಜನರಲ್ಲಿ ಆತಂಕದ ವಾತಾವರಣ ಸೃಷ್ಟಿಯಾಯಿತು.

ಗ್ರಾಮದ ಉಮೇಶ್ ನಾಗರೆಡ್ಡಿ ಅವರ ತೋಟದಲ್ಲಿ ಕಾಣಿಸಿಕೊಂಡ ಮೊಸಳೆ ಕಾರಣ ಸ್ಥಳೀಯರು ಭಯಭೀತರಾಗಿದ್ದರು. ಮಾಹಿತಿ ತಿಳಿದ ತಕ್ಷಣ ಅರಣ್ಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿದರು.

ಗಸ್ತು ಅರಣ್ಯ ಪಾಲಕ ರುದ್ರೇಶ್ ಮೇತ್ರಿ ಅವರ ನೇತೃತ್ವದಲ್ಲಿ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ, ಮೊಸಳೆಯನ್ನು ಯಾವುದೇ ಅಪಾಯವಾಗದಂತೆ ಸುರಕ್ಷಿತವಾಗಿ ಸೆರೆ ಹಿಡಿದು ರಕ್ಷಿಸಿದರು.

ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಸದಾಶಿವ ಮಾಂಗ, ಬಸವರಾಜ ನ್ಯಾಮಗೌಡ, ಸೋಮ ಆಮಾತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊಸಳೆ ಸೆರೆ ಹಿಡಿದ ಬಳಿಕ ಗ್ರಾಮಸ್ಥರು ನಿಟ್ಟುಸಿರು ಬಿಟ್ಟರು.

# ತೈಲ ಅಬಕಾರಿ ಸುಂಕ ಕಡಿತ



**ನವದೆಹಲಿ, ಮಾ.27:** ತೈಲದ ಮೇಲಿನ ಅಬಕಾರಿ ಸುಂಕವನ್ನು ಕೇಂದ್ರ ಸಕಾರ ಇಳಿಕೆ ಮಾಡುವ ಮೂಲಕ ಪೆಟ್ರೋಲ್ , ಡಿಸೇಲ್ ಬೆಲೆ ಏರಿಕೆಯ ಆತಂಕದಲ್ಲಿದ್ದ ಜನರಿಗೆ ನಿರಾಳ ನೀಡಿದೆ.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷದಿಂದ ಕಚ್ಚಾ ತೈಲ ಬೆಲೆ ಏರಿಕೆಯಾಗಿ ಚಿಲ್ಲರೆ ಮಾರಾಟದ ಪೆಟ್ರೋಲ್ ಮತ್ತು ಡಿಸೇಲ್ ಬೆಲೆ ಏರಿಕೆಯ ಆತಂಕ ಸೃಷ್ಟಿಯಾಗಿತ್ತು. ಆದರೆ ಕೇಂದ್ರ ಸರ್ಕಾರ ತೈಲದ ಅಬಕಾರಿ ಸುಂಕ ಇಳಿಕೆ ಮಾಡುವ ಮೂಲಕ ಬೆಲೆ ಏರಿಕೆ ಹೊರೆಯಿಂದ ಜನರನ್ನು ಮುಕ್ತ ಮಾಡಿದ್ದು, ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಯಥಾಸ್ಥಿತಿಯಲ್ಲೇ ಮುಂದುವರಿಯಲಿದೆ.

ಕೇಂದ್ರ ಸರ್ಕಾರ ಅಬಕಾರಿ ಸುಂಕವನ್ನು ಪ್ರತಿ ಲೀಟರ್ ಪೆಟ್ರೋಲ್‌ಗೆ 3 ರೂಗಳಿಗೆ ಹಾಗೂ ಪ್ರತಿ ಲೀಟರ್ ಡೀಸೆಲ್‌ಗೆ ಶೂನ್ಯ ಇಳಿಕೆ ಮಾಡಿದೆ. ಪ್ರಸ್ತುತ ಪ್ರತಿ ಲೀಟರ್ ಪೆಟ್ರೋಲ್ ಗೆ 13 ರೂ. ಹಾಗೂ ಪ್ರತಿ ಡೀಸೆಲ್ ಗೆ 10 ರೂ. ಅಬಕಾರಿ ಸುಂಕ ಇತ್ತು.ಜಾಗತಿಕ ಕಚ್ಚಾ ತೈಲ ಬೆಲೆ ಎರಡು ಪಟ್ಟು ಏರಿಕೆಯಾಗಿರುವುದರಿಂದ ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್, ಹೆಚ್‌ಪಿ ಮತ್ತು ಬಿಪಿ, ಪೆಟ್ರೋಲಿಯಂ ಮಾರಾಟ ಕಂಪನಿಗಳು ಪೆಟ್ರೋಲ್, ಡೀಸೆಲ್ ಬೆಲೆ ಏರಿಸಿರುವುದು ಅನಿವಾರ್ಯ ಎನಿಸಿತ್ತು. ಇದನ್ನು ತಪ್ಪಿಸಲು ಜೊತೆಗೆ ಜನಸಾಮಾನ್ಯರಿಗೆ ಬೆಲೆ ಏರಿಕೆ ಬಿಸಿ ತಾಗದಿರಲು ಕೇಂದ್ರ ಸರ್ಕಾರ ಅಬಕಾರಿ ಸುಂಕ ಕಡಿಮೆ ಮಾಡಿದೆ. ಇದರಿಂದ ಪೆಟ್ರೋಲ್, ಡೀಸೆಲ್ ಬೆಲೆ ಇಳಿಯುವುದಿಲ್ಲ. ಆದರೆ ಪೆಟ್ರೋಲಿಯಂ ಕಂಪನಿಗಳಿಗೆ ನಷ್ಟ ಹೊರೆ ಇಳಿಸಲು ಸಹಾಯವಾಗಲಿದೆ. ಜೊತೆಗೆ ಜನಸಾಮಾನ್ಯರಿಗೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಬಿಸಿಯು ತಪ್ಪಲಿದೆ.

ಈ ಕಡಿತದಿಂದ ಸಾಮಾನ್ಯ ಗ್ರಾಹಕರಿಗೆ ತಕ್ಷಣದ ಬೆಲೆ ಇಳಿಕೆ ದೊರೆಯುವ ಸಾಧ್ಯತೆ ಕಡಿಮೆ ಎನ್ನಲಾಗಿದೆ. ತೈಲ ಮಾರುಕಟ್ಟೆ ಕಂಪನಿಗಳು ಈಗಾಗಲೇ ಪ್ರತಿ ಲೀಟರ್ ಪೆಟ್ರೋಲ್ ಮತ್ತು ಡೀಸೆಲ್ ವಾರಾಟದಲ್ಲಿ ಸುವಾರು 48.8 ನಷ್ಟ ಅನುಭವಿಸುತ್ತಿರುವುದರಿಂದ, ಸುಂಕ ಕಡಿತದ ಪ್ರಯೋಜನವನ್ನು ಅವರು ತಮ್ಮ ನಷ್ಟವನ್ನು ಸಮತೋಲನಗೊಳಿಸಲು ಬಳಸುವ ಸಾಧ್ಯತೆ ಇದೆ.ಜಾಗತಿಕ ತೈಲದ ಬೆಲೆ ಕಳೆದ ತಿಂಗಳಲ್ಲಿ 70 ಡಾಲರ್ ರಿಂದ 122 ಡಾಲರ್‌ರವರೆಗೆ ಏರಿಕೆಯಾಗಿದೆ. ಇದರಿಂದ ವಿಶ್ವದಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು 20ರಿಂದ 50 ಶೇಕಡಾ ಏರಿಕೆ ಕಂಡಿವೆ. ಕೇಂದ್ರ ಸರ್ಕಾರ ಜನರ ಮೇಲೆ ಹೆಚ್ಚಿನ ಭಾರ ಹಾಕುವುದನ್ನು ತಪ್ಪಿಸಲು ತನ್ನದೇ ಆದ ಹಣಕಾಸಿನ ಮೇಲೆ ಹೊರೆ ಹೊತ್ತಿದೆ" ಎಂದು ಕೇಂದ್ರ ಪೆಟ್ರೋಲಿಯಂ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ.

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕ್ರೂಡ್ ತೈಲದ ಬೆಲೆ ಭಾರೀ ಏರಿಕೆಯಾಗಿದೆ. ಅಮೆರಿಕ- ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಪರಿಣಾಮ, ಹಾರ್ಮುಜ್ ಜಲಸಂಧಿ ನಿರ್ಬಂಧದ ಕಾರಣದಿಂದ ಬ್ರೆಂಟ್ ಕ್ರೂಡ್ ಬೆಲೆ ಬ್ಯಾರೆಲ್‌ಗೆ 100 ಡಾಲರ್ ದಾಟಿ 122 ಡಾಲರ್‌ರವರೆಗೆ ಏರಿಕೆಯಾಗಿದೆ.

ದೇಶದ ಖಾಸಗಿ ಇಂಧನ ಮಾರಾಟ ಕಂಪನಿ ನಯಾರಾ ಎನರ್ಜಿ ಪೆಟ್ರೋಲ್ ಬೆಲೆಯನ್ನು 5ರೂ. ಮತ್ತು ಡೀಸೆಲ್ ಬೆಲೆಯನ್ನು 3ರೂ. ಹೆಚ್ಚಿಸಿದ್ದ ಬೆನ್ನಲ್ಲೇ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಮಾರಾಟ ಮಾಡುವ ಪೆಟ್ರೋಲ್, ಡೀಸೆಲ್ ಬೆಲೆಏರಿಕೆಯು ಆಗಲಿದೆ ಎಂಬ ಆತಂಕ ಸೃಷ್ಟಿಯಾಗಿತ್ತು. ತೈಲದ ಅಬಕಾರಿ ಸುಂಕ ಇಳಿಕೆಯಿಂದ ಈಗ ದೇಶದಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ದರಗಳು ಯತಾಸ್ಥಿತಿಯಲ್ಲಿ ಇರಲಿದೆ. ಹಾಗಾಗಿ ಮುಂದಿನ ದಿನಗಳಲ್ಲಿ ಏರಿಕೆಯಾಗಲಿ, ಇಳಿಕೆಯಾಗಲಿ ಇರುವುದಿಲ್ಲ.

ಅಬಕಾರಿ ಸುಂಕ ಕಡಿತದಿಂದ ಸರ್ಕಾರದ ಹಣಕಾಸಿನ ಮೇಲೆ ಒತ್ತಡ ಹೆಚ್ಚಿದರೂ, ಗ್ರಾಹಕರಿಗೆ ತಕ್ಷಣದ ಬೆಲೆ ಇಳಿಕೆ ಸಾಧ್ಯತೆ ಕಡಿಮೆ ಎಂಬುದಾಗಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.
ಹಾರ್ಮುಜ್ ಜಲಸಂಧಿ ಜಾಗತಿಕ ಇಂಧನ ಸರಬರಾಜಿನಲ್ಲಿ ಮಹತ್ವದ ಪಾತ್ರವಹಿಸುತ್ತದೆ. ವಿಶ್ವದ ಸುಮಾರು 20-25 ಮಿಲಿಯನ್ ಬ್ಯಾರೆಲ್ ಕಚ್ಚಾ ತೈಲ ಪ್ರತಿದಿನ ಈ ಮಾರ್ಗದ ಮೂಲಕ ಸಾಗುತ್ತದೆ. ಭಾರತವೂ ತನ್ನ ಕಚ್ಚಾ ತೈಲ ಆಮದುಗಳ 40-50 ಶೇಕಡಾವರೆಗೆ ಈ ಮಾರ್ಗದ ಮೇಲೆ ಅವಲಂಬಿತವಾಗಿದೆ.
ಇದರಿಂದ ದೇಶದಲ್ಲಿ ಇಂಧನ ಕೊರತೆಯ ಭೀತಿ ಮೂಡಿದ್ದರೂ, ಸರ್ಕಾರ ಯಾವುದೇ ತುರ್ತು ಸಮಸ್ಯೆ ಇಲ್ಲ ಎಂದು ಸ್ಪಷ್ಟಪಡಿಸಿದೆ. ದೇಶದಲ್ಲಿ ಸುಮಾರು 60 ದಿನಗಳ ಕಚ್ಚಾ ತೈಲ ಸಂಗ್ರಹ ಮತ್ತು 30 ದಿನಗಳ ಎಲ್‌ಪಿಜಿ ಸಂಗ್ರಹ ಲಭ್ಯವಿದೆ ಎಂದು ತಿಳಿಸಿದೆ.

ಇದಲ್ಲದೆ, ಭಾರತ ತೈಲ ಮತ್ತು ಎಲ್‌ಪಿಜಿ ಆಮದುಗಳನ್ನು ವಿಭಿನ್ನ ದೇಶಗಳಿಂದ ಹೆಚ್ಚಿಸಲು ಒಪ್ಪಂದಗಳನ್ನು ವೇಗಗೊಳಿಸಿದೆ. ಒಟ್ಟು ತೈಲ ಸಂಗ್ರಹವು 74 ದಿನಗಳಿಗೆ ಸಾಕಾಗುವಷ್ಟು ಇದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಲಾಕ್‌ಡೌನ್ ಪ್ರಸ್ತಾಪವಿಲ್ಲ: ಹರ್‌ದೀಪ್ ಸಿಂಗ್'
ದೇಶದಲ್ಲಿ ಎಲ್‌ಪಿಜಿ ಕೊರತೆಯಾಗಿರುವುದರಿಂದ ಲಾಕ್‌ಡೌನ್ ಜಾರಿಯಾಗಲಿದೆ ಎಂಬ ವರದಿಗಳನ್ನು ತಳ್ಳಿ ಹಾಕಿರುವ ಕೇಂದ್ರದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಖಾತೆ ಸಚಿವ ಹರ್‌ದೀಪ್ ಸಿಂಗ್ ಪುರಿ ದೇಶದಲ್ಲಿ ಲಾಕ್‌ಡೌನ್ ಜಾರಿಯಾಗಲಿದೆ ಎಂಬುದು ಶುದ್ಧ ಸುಳ್ಳು. ಅಂತಹ ಯಾವುದೇ ಪ್ರಸ್ತಾವನೆಗಳು ಕೇಂದ್ರ ಸರ್ಕಾರದ ಮುಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.'ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ತೈಲ, ಇಂಧನ ಹಾಗೂ ಇತರ ಅಗತ್ಯ ಸರಕುಗಳ ಸರಬರಾಜನ್ನು ಖಾತ್ರಿಪಡಿಸಿಕೊಳ್ಳಲು ಪ್ರಧಾನಿ ಮೋದಿ ಅವರ ನಾಯಕತ್ವದಲ್ಲಿ ಅಗತ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಯಾವುದೇ ಸವಾಲುಗಳನ್ನು ಎದುರಿಸಲು ಸಂಪೂರ್ಣ ಸಜ್ಜಾಗಿದ್ದೇವೆ ಎಂದಿದ್ದಾರೆ.
ಇಂತಹ ಜಾಗತಿಕ ಅನಿಶ್ಚಿತತೆ ಎದುರಾದಾಗ ಭಾರತ ಈ ಹಿಂದೆಯೂ ಪುಟಿದೇಳುವ ಸಾಮರ್ಥ್ಯವನ್ನು ಪ್ರದರ್ಶಿಸಿದೆ. ಅದೇ ರೀತಿ ಅಗತ್ಯಕ್ಕೆ ತಕ್ಕಂತೆ ಪೂರ್ವ ಸಿದ್ಧತೆ ಮತ್ತು ಸಂಘಟನಾತ್ಮಕವಾಗಿ ಭಾರತ ಕಾರ್ಯನಿರ್ವಹಿಸುವುದನ್ನು ಮುಂದುವರೆಸುತ್ತದೆ ಎಂದು ಅವರು ತಿಳಿಸಿದ್ದಾರೆ.ಇಂತಹ ಸಂದರ್ಭದಲ್ಲಿ ಬೇಜವಾಬ್ದಾರಿ ಹಾಗೂ ಸಮಸ್ಯೆ ಸೃಷ್ಟಿಸುವಂತಹ ವದಂತಿಗಳನ್ನುಯಾರೂ ಹರಡಬಾರದು. ಕೇಂದ್ರ ಸಚಿವರು ಹರ್‌ದೀಪ್ ಸಿಂಗ್ ಪುರಿ ಲಾಕ್‌ಡೌನ್ ಪ್ರಶ್ನೆಯೇ ಇಲ್ಲ ಎಂದಿದ್ದಾರೆ. ಲಾಕ್ ಡೌನ್ ಪ್ರಶ್ನೆಯೇ ಇಲ್ಲ ಎಂದು ಪುನರುಚ್ಚರಿಸಿದರು.

ರಾಜ್ಯದಲ್ಲೂ ತೈಲ ಸುಂಕ ಇಳಿಕೆ ಸುಳಿವು
ರಾಜ್ಯದಲ್ಲೂ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಸುಂಕವನ್ನು ಕಡಿಮೆ ಮಾಡುವ ಸುಳಿವನ್ನ ಗೃಹ ಸಚಿವ ಡಾಕ್ಟರ್ ಜಿ ಪರಮೇಶ್ವರ್ ನೀಡಿದ್ದಾರೆ ಕೇಂದ್ರ ಸರ್ಕಾರ ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ಅಬಕಾರಿ ಸುಂಕ ಇಳಿಸಿದ ವಿಚಾರಕ್ಕೆ ಸಂಬಂಧಪಟ್ಟಂತೆ ರಾಜ್ಯದಲ್ಲೂ ಸುಂಕ ಇಳಿಸುತ್ತೀರಾ ಅಂದ್ರೆ ಪ್ರಶ್ನೆಗೆ ಈ ಬಗ್ಗೆ ಸಿದ್ದರಾಮಯ್ಯ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು ಪೆಟ್ರೋಲ್ ಡೀಸೆಲ್ ಮೇಲಿನ ಸುಂಕ ಕಡಿತ ಮಾಡುವ ಬಗ್ಗೆ ಸಚಿವ ಸಂಪುಟದಲ್ಲಿ ಅಗತ್ಯ ಬಿದ್ದರೆ ಚರ್ಚೆ ಚರ್ಚೆ ಮಾಡುತ್ತೇವೆ ಅಂತಿಮವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಬಗ್ಗೆ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಹೇಳಿದರು.

# ದೇಶದಾದ್ಯಂತ 135 ದ್ವಿಚಕ್ರ ವಾಹನಗಳ ವಿತರಣೆ




**ಬೆಂಗಳೂರು.ಮಾ27:** ಉದ್ಯೋಗಿ ಕಲ್ಯಾಣಕ್ಕೆ ಆದ್ಯತೆ ನೀಡುವ ಮೂಲಕ ಮೌರ್ಯ ಕನ್ಸೆಪ್ಟ್ ತನ್ನ 20ನೇ ವರ್ಷದ ಸಂಭ್ರಮವನ್ನು ಅರ್ಥಪೂರ್ಣವಾಗಿ ಆಚರಿಸುತ್ತಿದೆ. ಸಂಸ್ಥೆಯ ವತಿಯಿಂದ ದೇಶದಾದ್ಯಂತ ತನ್ನ ಸಿಬ್ಬಂದಿಗೆ 135 ದ್ವಿಚಕ್ರ ವಾಹನಗಳನ್ನು ವಿತರಿಸಲಾಗಿದ್ದು, ಉದ್ಯೋಗಿ ಪ್ರಥಮ ಸ್ಥಿ ಧೋರಣೆಯನ್ನು ಮತ್ತಷ್ಟು ಬಲಪಡಿಸಲಾಗಿದೆ. ಪ್ರಸ್ತುತ ಭಾರತ ದೇಶದ ವಿವಿಧ ಭಾಗಗಳಲ್ಲಿ 45 ಶಾಖೆಗಳು ಮತ್ತು 330ಕ್ಕೂ ಅಧಿಕ ಸಿಬ್ಬಂದಿಯನ್ನು ಹೊಂದಿರುವ ಸಂಸ್ಥೆ, ಉದ್ಯೋಗ ಸೃಷ್ಟಿ ಹಾಗೂ ಸಿಬ್ಬಂದಿ ಸಬಲೀಕರಣದ ದಿಟ್ಟ ಉದ್ದೇಶದೊಂದಿಗೆ ತನ್ನ ವಿಸ್ತರಣೆಯನ್ನು ಮುಂದುವರಿಸುತ್ತಿದೆ.

ಮೌರ್ಯ ಕನ್ಸೆಪ್ಟ್ ಇತ್ತೀಚೆಗೆ 1.5 ಕೋಟಿ ಮೌಲ್ಯದ 6 ಮಹೀಂದ್ರ ಃಇ6 ಎಲೆಕ್ಟ್ರಿಕ್ ವಾಹನಗಳನ್ನು ಹಾನೆಸ್ಟಿ ಡೆಲಿವರ್ಡ್ ಸ್ಲೋಗನ್ ಅಡಿಯಲ್ಲಿ ಉಡುಗೊರೆಯಾಗಿ ನೀಡಿದೆ.
ಮೌರ್ಯ ಕಾನ್ಸೆಪ್ಟ್ ಸಂಸ್ಥಾಪಕ ವೇಣುಗೋಪಾಲ್ ಮಾತನಾಡಿ, "ನಮ್ಮ ಉದ್ಯೋಗಿಗಳೇ ನಮ್ಮ ಶಕ್ತಿ, ನಮ್ಮ ಸಂಸ್ಥೆಯ ಬೆನ್ನೆಲುಬು. ಅವರ ಸಂಚಾರ ಸುಗಮಗೊಳಿಸಲು, ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಹಾಗೂ ಅವರ ಸಮಗ್ರ ಬೆಳವಣಿಗೆಗೆ ಬೆಂಬಲ ನೀಡುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೆ ತಂದಿದ್ದೇವೆ" ಎಂದು ಹೇಳಿದರು.

# ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ಟಿಕೆಟ್ ನೀಡಲು ಬಿವೈವಿಗೆ ಹರೀಶ್ ಮನವಿ



**ಬೆಂಗಳೂರು, ಮಾರ್ಚ್ 27-** ಪ್ರತಿಷ್ಠಿತ ವಾಗ್ದೇವಿ ವಿಲಾಸ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷರು ಹಾಗೂ ಇಸ್ರೋ ಸಂಸ್ಥೆಯ ಮಾಜಿ ವಿಜ್ಞಾನಿಗಳಾದ ಕೆ. ಹರೀಶ್ ಅವರು ಮುಂಬರುವ ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣೆಗೆ ಭಾರತೀಯ ಜನತಾ ಪಾರ್ಟಿಯ ಅಧಿಕೃತ ಅಭ್ಯರ್ಥಿಯಾಗಿ ಸ್ಪರ್ಧಿಸಲು ಆಕಾಂಕ್ಷೆ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಅವರು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ. ವೈ. ವಿಜಯೇಂದ್ರ ಅವರಿಗೆ ಇಂದು ಅಧಿಕೃತವಾಗಿ ಮನವಿ ಪತ್ರವನ್ನು ಸಲ್ಲಿಸಿ, ತಮಗೆ ಸ್ಪರ್ಧಿಸಲು ಅವಕಾಶ ನೀಡಬೇಕೆಂದು ಕೋರಿದ್ದಾರೆ. ಕೃ. ನರಹರಿ ಅವರು 5 ಬಾರಿ ಪ್ರತಿನಿಧಿಸಿದ್ದ ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ಈ ಬಾರಿ ಕೆ. ಹರೀಶ್ ಅವರು ಸ್ಪರ್ಧಿಸಲು ಆಕಾಂಕ್ಷೆ ವ್ಯಕ್ತಪಡಿಸಿದ್ದಾರೆ.

ವೃತ್ತಿಯಲ್ಲಿ ಎಲೆಕ್ಟ್ರಾನಿಕ್ಸ್ ಇಂಜಿನಿಯರ್ ಆಗಿರುವ ಹರೀಶ್ ಅವರು ದೇಶದ ಹೆಮ್ಮೆಯ ಇಸ್ರೋ (ಖಙಖಔ) ಸಂಸ್ಥೆಯಲ್ಲಿ 17 ವರ್ಷಗಳ ಕಾಲ ವಿಜ್ಞಾನಿಯಾಗಿ ಸೇವೆ ಸಲ್ಲಿಸಿದ ಅಪಾರ ಅನುಭವ ಹೊಂದಿದ್ದಾರೆ. ಬಾಲ್ಯದಿಂದಲೂ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಕ್ರಿಯ ಸ್ವಯಂಸೇವಕರಾಗಿರುವ ಇವರು, ಸಂಘದ ಸೇವಾ ಮತ್ತು ಬೌದ್ಧಿಕ ವಿಭಾಗಗಳಲ್ಲಿ ಪ್ರಮುಖ ಜವಾಬ್ದಾರಿಗಳನ್ನು ನಿಭಾಯಿಸುವುದರ ಜೊತೆಗೆ ರಾಮಜನ್ಮಭೂಮಿ ಚಳುವಳಿ ಹಾಗೂ ರಾಮಮಂದಿರ ನಿರ್ಮಾಣದ ನಿಧಿ ಸಂಗ್ರಹಣೆಯಲ್ಲಿಯೂ ಸಕ್ರಿಯವಾಗಿ ಪಾಲ್ಗೊಂಡಿದ್ದರು. ರಾಜಕೀಯವಾಗಿ 1987 ರಿಂದಲೂ ಬಿಜೆಪಿಯ ನಿಷ್ಠಾವಂತ ಪ್ರಾಥಮಿಕ ಸದಸ್ಯರಾಗಿರುವ ಇವರು, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ಅನಂತಕುಮಾರ್ ಅವರ ಪರವಾಗಿ ಹಾಗೂ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಅರವಿಂದ ಲಿಂಬಾವಳಿ ಮತ್ತು ಮಂಜುಳಾ ಅರವಿಂದ ಲಿಂಬಾವಳಿ ಅವರ ಪರವಾಗಿ ಚುನಾವಣಾ ಪ್ರಚಾರ ಕಾರ್ಯಗಳಲ್ಲಿ ಶ್ರಮಿಸಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿ ಅಪ್ರತಿಮ ಸೇವೆ ಸಲ್ಲಿಸುತ್ತಿರುವ ಹರೀಶ್ ಅವರು, ಬೆಂಗಳೂರು, ರಾಮನಗರ, ಚಿಕ್ಕಮಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಹಾಗೂ ಮಲೇಶಿಯಾದಲ್ಲಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ 10,000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ. ವಿಶೇಷವಾಗಿ "ಯಾವುದೇ ಬಡ ಮಗು ಶಿಕ್ಷಣದಿಂದ ವಂಚಿತವಾಗಬಾರದು" ಎಂಬ ಆಶಯದೊಂದಿಗೆ ಮಾರತಹಳ್ಳಿ ಮತ್ತು ವರ್ತೂರಿನಲ್ಲಿ 'ವಾಗ್ದೇವಿ ವಿಲಾಸ ಸೂಪರ್ ಶಾಲೆ'ಗಳನ್ನು ಆರಂಭಿಸಿದ್ದು, ಇಲ್ಲಿ 800ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸಂಪೂರ್ಣ ಉಚಿತ ಶಿಕ್ಷಣ ನೀಡಲಾಗುತ್ತಿದೆ. ಪ್ರಸ್ತುತ ಬಿಜೆಪಿಯ ಶಿಕ್ಷಣ ಪ್ರಕೋಷ್ಠದ ರಾಜ್ಯ ಸಮಿತಿ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿರುವ ಇವರು, ಶಿಕ್ಷಣ ಕ್ಷೇತ್ರದಲ್ಲಿನ ತಮ್ಮ ಸುದೀರ್ಘ ಅನುಭವ ಮತ್ತು ಸಮಾಜದೊಂದಿಗೆ ಇರುವ ನಿಕಟ ಸಂಪರ್ಕವು ಶಿಕ್ಷಕರ ಸಮಸ್ಯೆಗಳಿಗೆ ಧ್ವನಿಯಾಗಲು ಪೂರಕವಾಗಲಿದೆ ಎಂಬ ವಿಶ್ವಾಸದೊಂದಿಗೆ ಈ ಮನವಿಯನ್ನು ಸಲ್ಲಿಸಿದ್ದಾರೆ.

# ಮಾನವೀಯ ಯೋಜನೆಗಳಿಗೆ ಕೇಂದ್ರ ಪಾಲಿಕೆ ಬಜೆಟ್‌ನಲ್ಲಿ ಒತ್ತು-3,427 ಕೋಟಿ ಅಂದಾಜು ವೆಚ್ಚ

**ಬೆಂಗಳೂರು,ಮಾ. 27.-** ಬೆಂಗಳೂರು ಕೇಂದ್ರ ಪಾಲಿಕೆ ಬಜೆಟ್: ಮಾನವೀಯತೆ ಆಧುನಿಕತೆ ಸೇರ್ಪಡೆ..

ಬೈಕ್ ಆಂಬ್ಯುಲೆನ್ಸ್, ಹೈಟೆಕ್ ವರ್ಚುವಲ್ ಕ್ಲಿನಿಕ್‌ಗಳು, ವಿಶೇಷಚೇತನ ಮಕ್ಕಳಿಗಾಗಿ ವಾತ್ಸಲ್ಯ ಮನೆ ಹಾಗೂ ಆಸರೆಯಿಲ್ಲದ ಹಿರಿಯರಿಗೆ "ಹಿರಿಯರ ವಾಡಿ" ನಿರ್ಮಾಣದಂತಹ ಮಾನವೀಯ ಯೋಜನೆಗಳಿಗೆ ಒತ್ತು ನೀಡಿದ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಚೊಚ್ಚಲ ಬಜೆಟ್ ಮಂಡಿಸಲಾಗಿದೆ.

ಪುರಭವನದಲ್ಲಿ ಆಯುಕ್ತ ರಾಜೇಂದ್ರ ಚೋಳನ್ ಅವರು ಬಜೆಟ್ ಮಂಡಿಸಿ ಒಟ್ಟು 3,427 ಕೋಟಿ ಅಂದಾಜು ವೆಚ್ಚ ಹೊಂದಿದ್ದು, 78.65 ಲಕ್ಷ ಮಿಗತೆ ಉಳಿಕೆ ಮೂಲಕ ಆರ್ಥಿಕ ಶಿಸ್ತಿಗೆ ಈ ಬಜೆಟ್ ಉದಾಹರಣೆ ಎಂದರು.

"ಜೀವಂತ ಬಜೆಟ್" ಆಯುಕ್ತರ ವಿವರಣೆ
ಈ ಬಜೆಟ್ ಕೇವಲ ಅಂಕಿ-ಅಂಶಗಳಿಗೆ ಸೀಮಿತವಲ್ಲದೆ, ನಾಡಪ್ರಭು ಕೆಂಪೇಗೌಡರ ಪರಂಪರೆ ಮತ್ತು ಎಐ ಆಧಾರಿತ ಆಧುನಿಕತೆ ನಡುವಿನ ಸೇತುವೆಯಾಗಿದೆ ಎಂದು ಹೇಳಿದರು.
ಇ-ಖಾತಾ ವ್ಯವಸ್ಥೆ, ರಸ್ತೆಗುಂಡಿ ಮುಕ್ತ ನಗರ ಗುರಿ ಹಾಗೂ ಡಿಜಿಟಲ್ ಆಡಳಿತಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ತಿಳಿಸಿದರು.
ಆರೋಗ್ಯ ಮತ್ತು ಮಾನವೀಯ ಯೋಜನೆಗಳು
ಟ್ರಾಫಿಕ್‌ನಲ್ಲೂ ತ್ವರಿತ ಸೇವೆಗೆ ಬೈಕ್ ಆಂಬ್ಯುಲೆನ್ಸ್
22 ಸ್ಮಾರ್ಟ್ ವರ್ಚುವಲ್ ಕ್ಲಿನಿಕ್‌ಗಳು
28 ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆ
ಬಡಜನರಿಗೆ ಇಂದಿರಾ ಕ್ಯಾಂಟೀನ್ ಮೂಲಕ ಆಹಾರ
ವಿಶೇಷಚೇತನ ಮಕ್ಕಳಿಗೆ "ವಾತ್ಸಲ್ಯ ಮನೆ"
ಹಿರಿಯರಿಗೆ "ಹಿರಿಯರ ವಾಡಿ" ವಸತಿ
ಮೂಲಸೌಕರ್ಯ ಅಭಿವೃದ್ಧಿ
217.50 ಕೋಟಿ ವೆಚ್ಚದಲ್ಲಿ 145 ಕಿಮೀ ಪ್ರಮುಖ ರಸ್ತೆ ಅಭಿವೃದ್ಧಿ
200 ಕೋಟಿ ವೆಚ್ಚದಲ್ಲಿ 115 ಕಿಮೀ ವಾರ್ಡ್ ರಸ್ತೆಗಳು
12 ಟ್ರಾಫಿಕ್ ಜಂಕ್ಷನ್ ಸುಧಾರಣೆ
50 ಕಿಮೀ ಪಾದಚಾರಿ ಮಾರ್ಗ ಸುಧಾರಣೆ
9 ಹೊಸ ಪಾದಚಾರಿ ಮೇಲೇತುವೆಗಳು
ಪರಿಸರ ಮತ್ತು ನಗರ ಸೌಂದರ್ಯ
ಬ್ಲೂ-ಗ್ರೀನ್ ಕಾರಿಡಾರ್‌ಗಳು
50,000 ಸಸಿ ನೆಡುವ ಯೋಜನೆ
ಹಲಸೂರು ಕೆರೆ ಅಭಿವೃದ್ಧಿಗೆ 82 ಕೋಟಿ
215 ಉದ್ಯಾನವನಗಳ ಅಭಿವೃದ್ಧಿ



ಐಇಆ ದೀಪಗಳಿಂದ 60% ವಿದ್ಯುತ್ ಉಳಿತಾಯ
ಆದಾಯ ಮತ್ತು ಆಸ್ತಿ ನಿರ್ವಹಣೆ
ತೆರಿಗೆ ಗುರಿ: -1,150 ಕೋಟಿ
ಪಾಲಿಕೆ ಆಸ್ತಿಗಳಿಂದ 58 ಕೋಟಿ ಬಾಡಿಗೆ
112 ಮಾರುಕಟ್ಟೆಗಳ ಮಳಿಗೆಗಳಿಂದ 25 ಕೋಟಿ ಆದಾಯ
ರಸೆಲ್ ಮಾರುಕಟ್ಟೆ ಅಭಿವೃದ್ಧಿಗೆ 70 ಕೋಟಿ
ನಗರ ಸೇವೆಗಳು
ಘನತ್ಯಾಜ್ಯ ನಿರ್ವಹಣೆಗೆ 215 ಕೋಟಿ
60 ಸಾರ್ವಜನಿಕ ಶೌಚಾಲಯಗಳು, 20 ಶೀ-ಟಾಯ್ಲೆಟ್
ಪೌರಕಾರ್ಮಿಕರಿಗೆ ಮಸ್ಟರಿಂಗ್ & ಸುವಿಧಾ ಕೇಂದ್ರಗಳು
ಸಮಾಜ ಕಲ್ಯಾಣ
500 ಮನೆಗಳ ನಿರ್ಮಾಣ
ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ, ಯೂನಿಫಾರ್ಮ್
ಲ್ಯಾಪ್‌ಟ್ಯಾಪ್ ವಿತರಣೆ
ಬೀದಿ ವ್ಯಾಪಾರಿಗಳಿಗೆ ಇ-ವೆಂಡಿಂಗ್ ವಾಹನ
ನಿರುದ್ಯೋಗಿಗಳಿಗೆ ಸಹಾಯಧನ
ವಿಶೇಷ ಅಂಶ
ಈ ಬಜೆಟ್‌ನಲ್ಲಿ 1,760 ಕೋಟಿ ಸಾರ್ವಜನಿಕ ಕಾಮಗಾರಿಗಳಿಗೆ ಮೀಸಲಿಟ್ಟು, ನಗರ ಅಭಿವೃದ್ಧಿಗೆ ಮಹತ್ವದ ಒತ್ತು ನೀಡಲಾಗಿದೆ.
ಒಟ್ಟಿನಲ್ಲಿ, ಈ ಬಜೆಟ್ "ಕಾಂಕ್ರೀಟ್ ನಗರಕ್ಕೆ ಮಾನವೀಯ ಸ್ಪರ್ಶ ನೀಡುವ" ಹಾಗೂ ನಾಗರಿಕರ ದೈನಂದಿನ ಬದುಕು ಸುಧಾರಿಸುವ ದಿಕ್ಕಿನಲ್ಲಿ ರೂಪುಗೊಂಡಿದೆ.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಗುಲಾಮಗಿರಿ ಮುಕ್ತ ವಿಶ್ವ ನಮ್ಮದಾಗಲಿ

**ಕಲಬುರಗಿ: ಮಾ.27:**ದಾಸ್ಯ ಎಂಬುದು ದೈಹಿಕ ಮತ್ತು ಮಾನಸಿಕವಾಗಿ ಹಿಂಸೆ ನೀಡುವ ಒಂದು ಕೆಟ್ಟ ಪ್ರವೃತ್ತಿಯಾಗಿದ್ದು, ಇದು ವಿಶ್ವದಾದ್ಯಂತ ಸಂಪೂರ್ಣವಾಗಿ ನಿರ್ಮೂಲನೆಯಾಗಬೇಕಾಗಿದೆ. ಗುಲಾಮಗಿರಿಯ ಆಧುನಿಕ ರೂಪಗಳಾದ ಮಾನವ ಕಳ್ಳಸಾಗಣೆ, ಲೈಂಗಿಕ ಶೋಷಣೆ, ಬಾಲಕಾರ್ಮಿಕತೆ, ಬಲವಂತದ ವಿವಾಹ ಮತ್ತು ಸಶಸ್ತ್ರ ಸಂಘರ್ಷಗಳಲ್ಲಿ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿರ್ಮೂಲನೆ ಮಾಡುವುದು. ಗುಲಾಮ ಪದ್ಧತಿ ಅಥವಾ ದಾಸ್ಯ ಮುಕ್ತ ವಿಶ್ವ ನಮ್ಮದಾಗಲಿ ಎಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ ಆಶಯ ವ್ಯಕ್ತಪಡಿಸಿದರು.

ನಗರದ ಖಾದ್ರಿ ಚೌಕ್‌ನ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಗುರುವಾರ ಜರುಗಿದ 'ಅಂತಾರಾಷ್ಟ್ರೀಯ ಗುಲಾಮಗಿರಿ ವಿರೋಧಿ



ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ವ್ಯಕ್ತಿಗಳ ಕಳ್ಳಸಾಗಣೆ ಮತ್ತು ವೇಶ್ಯಾವಾಟಿಕೆ ಶೋಷಣೆ ನಿಗ್ರಹಿಸಲು ಸಮಾವೇಶವನ್ನು ಅಂಗೀಕರಿಸಿದ ದಿನವನ್ನು ಗುರುತಿಸಲು ಈ ದಿನವನ್ನು ಪ್ರಾರಂಭಿಸಲಾಯಿತು. ಇಲ್ಲಿಯವರೆಗೆ ಜಗತ್ತು ಸಾಕಷ್ಟು ಪ್ರಗತಿ ಸಾಧಿಸಿದ್ದರೂ, ಗುಲಾಮಗಿರಿಗೆ ಬಲಿಯಾದವರ ಸಂಖ್ಯೆ ಬಹಳಷ್ಟಿದೆ. ಅಂತರರಾಷ್ಟ್ರೀಯ ಕಾರ್ಮಿಕ ಸಂಸೆಯ ಪ್ರಕಾರ, ವಿಶ್ವಾದ್ಯಂತ 40 ದಶಲಕ್ಷಕ್ಕೂ ಹೆಚ್ಚು ಜನರು ಆಧುನಿಕ ಗುಲಾಮಗಿರಿಗೆ ಬಲಿಯಾಗಿದ್ದಾರೆ.150 ದಶಲಕ್ಷಕ್ಕೂ ಹೆಚ್ಚು ಬಾಲ ಕಾರ್ಮಿಕರಾಗಿದ್ದು, ಪ್ರಪಂಚದಾದ್ಯಂತ ಹತ್ತು ಮಕ್ಕಳಲ್ಲಿ ಒಬ್ಬರಿಗೆ ಇದು ಕಾರಣವಾಗಿದೆ. ಆದ್ದರಿಂದ ಗುಲಾಮಗಿರಿ ಮುಕ್ತ ವಿಶ್ವದ ನಿರ್ಮಾಣಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳಿದ್ದರು.

## ಏ. 5 ರಂದು ಡಾ. ವಿದ್ಯಾಭೂಷಣ್ ಸಂಗೀತ ಕಚೇರಿ



**ಬೆಂಗಳೂರು ಮಾ. 27;** ಕ್ಯಾನ್ಸರ್, ಡಯಾಲಿಸಸ್ ರೋಗಿಗಳ ನೆರವಿಗಾಗಿ ಏ. 5ರಂದು ಎ.ಡಿ.ಎ. ರಂಗಮಂದಿರದಲ್ಲಿ ವಿದ್ಯಾನಿಧಿ ಡಾ. ವಿದ್ಯಾಭೂಷಣ್ ಅವರಿಂದ ವಿಶೇಷ ಶಾಸ್ತ್ರೀಯ ಸಂಗೀತ ಕಚೇರಿ ಕಾರ್ಯಕ್ರಮ ಏರ್ಪಡಿಸಲಾಗಿದೆ.

"ಸೇವೆಗಾಗಿ ಸಂಗೀತ ಸಂಗೀತದ ಮೂಲಕ ಮಾನವೀಯತೆ" ಎಂಬ ಅರ್ಥಪೂರ್ಣ ಕಾರ್ಯಕ್ರಮ ಭಾನುವಾರ ಸಂಜೆ 5:30 ಕ್ಕೆ ಎ.ಡಿ.ಎ. ರಂಗಮಂದಿರದಲ್ಲಿ ನಡೆಯಲಿದೆ.

ಲಯನ್ಸ್ ಕ್ಲಬ್ ಆಫ್ ಬೆಂಗಳೂರು ಸಂಕಲ್ಪದಿಂದ ಸಮಾಜಮುಖಿ ಸೇವಾ ಕಾರ್ಯಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿದೆ. ಕ್ಯಾನ್ಸರ್ ಮತ್ತು ಡಯಾಲಿಸಿಸ್ ಚಿಕಿತ್ಸೆಗೆ ಅಗತ್ಯವಿರುವ ರೋಗಿಗಳಿಗೆ ನೆರವು ಒದಗಿಸುವ ಉದ್ದೇಶ ಹೊಂದಿದೆ. ಸಂಗೀತ ಮತ್ತು ಸೇವೆಯನ್ನು ಒಂದಾಗಿಸುವ ಈ ವಿನೂತನ ಪ್ರಯತ್ನವು ಸಮಾಜದ ಸಹಾನುಭೂತಿ ಮತ್ತು ಸಹಕಾರವನ್ನು ಹೆಚ್ಚಿಸಲು ನೆರವಾಗಲಿದೆ. ಸಮಾಜದ ಒಳಿತಿಗಾಗಿ ನಡೆಯುತ್ತಿರುವ ಈ ಸೇವಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಾಗೂ ಅಗತ್ಯವಿರುವವರಿಗೆ ನೆರವಾಗಲು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಂಬಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ: +91 99019 01339/ 9739991752 ಸಂಪರ್ಕಿಸಲು ಮನವಿ ಮಾಡಿದೆ.

# ಶೇ.6ರಷ್ಟು ಒಳ ಮೀಸಲಾತಿ ಜಾರಿಗೆ ಒತ್ತಾಯ

**ಕಲಬುರಗಿ: ಮಾ.27:**ಮಾದಿಗರು ಸೇರಿದಂತೆ ಮೂಲ ಅಸ್ಪೃಶ್ಯರಿಗೆ ಒಳ ಮೀಸಲಾತಿ ಜಾರಿ ವಿಳಂಬ ಮಾಡುತ್ತಿರುವುದು ಖಂಡನೀಯ. ಎಸ್.ಸಿಗಳಿಗೆ ಇರುವ ಶೇ.15 ಮೀಸಲಾತಿ ಯಲ್ಲಿಯೇ ಶೇ.6 ರಷ್ಟು ಒಳ ಮೀಸಲಾತಿ ಜಾರಿಗೆ ತಂದು ರಾಜ್ಯ ಸರಕಾರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬೇಕು ಎಂದು ಮಾದಿಗ ಸಮಾಜದ ಯುವ ಮುಖಂಡ ಆನಂದ ತೆಗನೂರ ಅವರು ಮನವಿ ಮಾಡಿಕೊಂಡರು.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿ ಜಾರಿ ಮಾಡುವಂತೆ ಕಳೆದ 40 ವರ್ಷಗಳಿಂದ ಮಾದಿಗರು ನಿರಂತರ ಹೋರಾಟ ಮಾಡುತ್ತಲೇ ಬಂದಿದ್ದು ಮನವರಿಕೆ ಮಾಡಿಕೊಂಡಿದ್ದ ಹಿಂದಿನ ಬಿಜೆಪಿ ಸರಕಾರದ ಸಿ.ಎಂ ಬಸವರಾಜ ಬೊಮ್ಮಾಯಿ ಅವರು ಒಳ ಮೀಸಲಾತಿ ನೀಡಲು ರಾಜ್ಯ ಸರಕಾರದ ಸಚಿವ ಸಂಪುಟ ಒಪ್ಪಿಗೆ ಮೇರೆಗೆ ಕೇಂದ್ರಕ್ಕೆ ಶಿಪಾರಸ್ಸು ಮಾಡಿದ ನಂತರ ಇದನ್ನು ಕೆಲವರು ವಿರೋಧಿಸಿ ಸುಪ್ರೀಂ ಕೋರ್ಟ್ ದಾವೆ ಹಾಕಿದರು. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸುಪ್ರೀಂ ಕೋರ್ಟ್ ತ್ರಿಪೀಠ ಸದಸ್ಯ ಪೀಠ ಒಳ ಮೀಸಲಾತಿ ನೀಡುವಂತೆ ಆದೇಶ ಮಾಡಿತು.ಇದೆಲ್ಲವೂ ಆದ ಮೇಲೆ ನಾಗಮೋಹನ ದಾಸ ವರದಿ ಆಧಾರದ ಮೇಲೆ ಮೀಸಲಾತಿ ಹೆಚ್ಚಳ ಆಧಾರದಲ್ಲಿ ಶೇ.6 ಒಳ ಮೀಸಲಾತಿ ನಿರ್ಣಯ ತಗೆದುಕೊಂಡು ರಾಜ್ಯ ಸರಕಾರ ಆದೇಶ ಪತ್ರ ಹೊರಡಿಸಲಾಯಿತು. ಆದರೆ ಇದರಲ್ಲಿ ಕಾನೂನಿನ ತೊಡಕು ಇಟ್ಟು ಮೀಸಲಾತಿ ಕೊಟ್ಟ ರಾಜ್ಯ ಸರಕಾರದ ದಂದ್ವವನ್ನು ಸುಪ್ರೀಂ ಮೀಸಲಾತಿ ಹೆಚ್ಚಳ ಬಗ್ಗೆ ಪ್ರಶ್ನೆ ಮಾಡಿದೆ. ಇದರಿಂದ ಒಳ ಮೀಸಲಾತಿಗೆ ದೊಡ್ಡ ಕೊಡಲಿ ಏಟು ಬಿದ್ದಿದೆ. ಸಿ.ಎಂ ಸಿದ್ದರಾಮಯ್ಯನವರು ಬಸವಣ್ಣನವರ ತತ್ವ ಆದರ್ಶದಡಿಯಲ್ಲಿ ರಾಜ್ಯದಲ್ಲಿ ಎರಡನೇ ಬಾರಿಗೆ ಸಿ.ಎಂ ಆಗಿದ್ದಾರೆ. ನಮ್ಮೊಳಗೆ ಇರುವ ಕೊಂಡಿ ಮಂಜಣ್ಣ ಮತ್ತು ಮಲ್ಲಪ್ಪ ಶೆಟ್ಟಿ ಅಂತವರ ಮಾತನ್ನು ಕೇಳಿದರೆ ಸಮಸ್ಯೆಗೆ ಪರಿಹಾರ ಸಿಗಲು ಸಾಧ್ಯವಿಲ್ಲ.ತುಳಿತಕ್ಕೊಳಗಾದ ಮಾದಿಗರ ಅನ್ಯಾಯ ಆಗುತ್ತಿದೆ. ಎಸ್.ಸಿ ಗಳಿಗೆ ಈಗಿರುವ ಶೇ.15 ರಲ್ಲಿ ಮಾದಿಗರಿಗೆ ಶೇ.6 ರಷ್ಟು ಜನಸಂಖ್ಯೆಗೆ ಅನುಗುಣವಾಗಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಒಳಮೀಸಲಾತಿ ಜಾರಿಗೊಳಿಸಿ 58 ಸಾವಿರ ಸರಕಾರಿ ಉದ್ಯೋಗ ಭರ್ತಿ ಆಗಬೇಕೆಂದು ಅವರು ಆಗ್ರಹಿಸಿದ್ದಾರೆ.ರಾಜ್ಯದಲ್ಲಿ ನೀವು ಎರಡು ಬಾರಿ ಅಧಿಕಾರಕ್ಕೆ ಬರಲು ರಾಜ್ಯದ ಬಹುಸಂಖ್ಯಾತ ಮಾದಿಗರು ಸಂಪೂರ್ಣ ಶಕ್ತಿ ನೀಡಿದ್ದಾರೆ. ಈ ಜನರಿಗೆ ಒಳ ಮೀಸಲಾತಿ ಜಾರಿ ಮಾಡದೇ ಹೋದಲ್ಲಿ ಬರುವ



ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

# ಚಿತ್ತಾಪುರದಲ್ಲಿ ಅತೀ ಶೀಘ್ರದಲ್ಲಿ ಬಸವ ನಿರ್ಮಾಣಕ್ಕೆ ಅಡಿಗಲ್ಲು; ಪಾಟೀಲ್



**ಚಿತ್ತಾಪುರ;ಮಾ.27:** ತಾಲೂಕಿನ ಬಸವ ಅಭಿಮಾನಿಗಳ ಬಹುದಿನಗಳ ಬೇಡಿಕೆಯಾಗಿದ್ದ ಬಸವ ಭವನ ನಿರ್ಮಾಣಕ್ಕೆ ಅತೀ ಶೀಘ್ರದಲ್ಲಿ ಅಡಿಗಲ್ಲು ನೆರವೇರಿಸಲಾಗುವುದು ಅದಕ್ಕಾಗಿ ಸಮಾಜದ ಹಿತ ಚಿಂತಕರ, ಅಭಿಮಾನಿಗಳ ಸಭೆಯನ್ನು ಮಾ. 29 ರಂದು ಬೆಳಗ್ಗೆ 10 ಗಂಟೆಗೆ ಬಸವ ಭವನ ನಿರ್ಮಾಣಕ್ಕಾಗಿ ನಿಗದಿಪಡಿಸಿದ ಸ್ಥಳದಲ್ಲಿ ಕರೆಯಲಾಗಿದೆ ಎಂದು ಬಸವೇಶ್ವರ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ನಾಗರೆಡ್ಡಿ ಪಾಟೀಲ ಕರದಾಳ ಹೇಳಿದರು.ಪಟ್ಟಣದ ಅಣ್ಣಾರಾವ ಪಾಟೀಲ ಅಡತಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಸವ ಭವನ ನಿರ್ಮಾಣಕ್ಕಾಗಿ ಈಗಾಗಲೇ 2 ಎಕರೆ ಜಮೀನು ಖರೀದಿಯನ್ನು ಮಾಡಿದ್ದು ಕಂಪೌಂಡ್ ಗೋಡೆಯನ್ನು ಕಟ್ಟಲಾಗಿದೆ. ಸರ್ಕಾರದಿಂದ ಈಗಾಗಲೇ 50 ಲಕ್ಷ ಅನುದಾನ ಬಿಡುಗಡೆಯಾಗಿದ್ದು, ದಾನಿಗಳ ಸಹಾಯದಿಂದ ಭವನ ಹಾಗೂ ವಸತಿ ನಿಲಯ ಕಾಮಗಾರಿ ಕೈಗೊಳ್ಳಲಾಗುವುದು. ಅಲ್ಲಿ ಬಸವ ಭವನದ ಜೊತೆ ಪದವಿ ಮತ್ತು ಪದವಿ ಪೂರ್ವ ಕಲಿಯುತ್ತಿರುವ 50 ವಿದ್ಯಾರ್ಥಿನಿಯರಿಗಾಗಿ ವಸತಿ ನಿಲಯವನ್ನು ನಿರ್ಮಾಣ ಮಾಡಲಾಗುತ್ತಿದ್ದು. ಬಸವ ಭವನದಲ್ಲಿ ಬರುವ ಆದಾಯದಲ್ಲಿ ವಸತಿ ನಿಲಯದ ನಿರ್ವಹಣೆಯನ್ನು ಮಾಡಲಾಗುವದು ಎಂದು ತಿಳಿಸಿದರು. ಮಾ. 29 ರಂದು ಕರೆದಿರುವ ಪೂರ್ವಭಾವಿ ಸಭೆಗೆ ಸರ್ವರು ಬಂದು ಬಸವ ಭವನ ಮತ್ತು ವಸತಿ ನಿಲಯದ ಕುರಿತಾಗಿ ಸಲಹೆ ಸೂಚನೆಗಳನ್ನು ನೀಡಿ ಸಹಕಾರವನ್ನು ನೀಡಿದಲ್ಲಿ ಬರುವ ಬಸವ ಜಯಂತಿಯೊಳಗಾಗಿ ಅದನ್ನು ಪೂರ್ಣಗೊಳಿಸ ಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಉಪಾಧ್ಯಕ್ಷ ಡಾ.ಪ್ರಭುರಾಜ ಕಾಂತಾ, ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ನಾಗರಾಜ ಭಂಕಲಗಿ, ಮುಖಂಡರಾದ ಅಣ್ಣಾರಾವ ಪಾಟೀಲ ಮುಡಬೂಳ, ಅಶೋಕ ನಿಪ್ಪಾಣಿ, ಅನಿಲ್ ವಡ್ಡಡಗಿ ಇದ್ದರು.

## ಏ.5 ರಂದು ಡಾ.ಬಾಬು ಜಗಜೀವನರಾಂ ಜಯಂತಿಅರ್ಥಪೂರ್ಣವಾಗಿ ಆಚರಿಸೋಣ:ಎಡಿಸಿ ಶಿವಾನಂದ



**ಬೀದರ, ಮಾ.27:** ಏಪ್ರಿಲ್.5 ರಂದು ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಂ ಅವರ 119ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಂ ಅವರ 119ನೇ ಜಯಂತಿ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಬಾಬು ಜಗಜೀವನರಾಂ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ 10 ಗಂಟೆಗೆ ಡಾ.ಬಾಬು ಜಗಜೀವನರಾಂ ಅವರ ಪ್ರತಿಮೆಯಿಂದ ಭಾವಚಿತ್ರದ ಮೆರವಣಿಗೆ ಪ್ರಾರಂಭಗೊಂಡು ನಗರದ ಬಸವೇಶ್ವರ ವೃತ್ತ, ಭಗತಸಿಂಗ ವೃತ್ತ, ಅಂಬೇಡ್ಕರ ವೃತ್ತ, ಕರಿಯಪ್ಪ ವೃತ್ತ ಮಾರ್ಗವಾಗಿ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ 11 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯುವುದು ಎಂದರು.

ಅಂದು ನಗರದ ಎಲ್ಲ ಮಹನೀಯರ ವೃತ್ತಗಳಿಗೆ ದೀಪಾಲಂಕಾರ ಮಾಡುವುದು, ಎಲ್ಲ ಗ್ರಾಮ ಪಂಚಾಯತಗಳಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದು. ಮೆರವಣಿಗೆ ನಡೆಯುವ ಸ್ಥಳಗಳಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ನಗರಸಭೆ ವತಿಯಿಂದ ಮಾಡುವುದು. ಪೊಲೀಸ್ ಇಲಾಖೆ ವತಿಯಿಂದ ಮೆರವಣಿಗೆ ಹೋಗುವ ಸ್ಥಳಗಳಲ್ಲಿ ಪೊಲೀಸ್ ಬಂದೋಬಸ್ತ, ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಕಲಾ ತಂಡಗಳನ್ನು ನೀಡಲು ವ್ಯವಸ್ಥೆ ಮಾಡಬೇಕೆಂದರು.

ಈ ಸಭೆಯಲ್ಲಿ ಸಮಾಜದ ಮುಖಂಡರು ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಸಭೆಯಲ್ಲಿ ಬೀದರ ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಶರಣಪ್ಪಾ ಕೋಟಪ್ಪಗೋಳ, ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಯೋಗೇಶ, ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಸಮಾಜದ ಮುಖಂಡರಾದ ಚಂದ್ರಕಾಂತ ಹಿಪ್ಪಳಗಾಂವ, ರಾಜು ಕಡ್ಯಾಳ, ಫರ್ನಾಡಿಸ್ ಹಿಪ್ಪಳಗಾಂವ, ಜಾಪಟ್ ಕಡ್ಯಾಳ, ಜಯಶೀಲ ಮಿರಾಗಂಜ್, ಮಾರುತಿ ಶಾಖಾ, ರೋಹಿದಾಸ ಗೋಡೆ, ಸಂಘ ಸಂಸ್ಥೆಗಳು ಮುಖಂಡರು, ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾ.31 ರಂದು ಡಾ. ನಾಗಲಕ್ಷ್ಮಿ ಚೌಧರಿ ಅಥಣಿಗೆ : ಮಹಿಳಾ ದಿನಾಚರಣೆ ಉಡಿ ತುಂಬುವ ಕಾರ್ಯಕ್ರಮ

**ಅಥಣಿ : ಮಾ.27:**ಮಹಿಳಾ ಸಬಲೀಕರಣವು ಸಮಗ್ರ ಸಮಾಜದ ಪ್ರಗತಿಯ ಮೂಲಾಧಾರವಾಗಿದ್ದು, ಮಹಿಳೆಯರು ತಮ್ಮಲ್ಲಿ ಆತ್ಮವಿಶ್ವಾಸ, ಸ್ವಾಭಿಮಾನ ಮತ್ತು ಸ್ವಾವಲಂಬನೆಯನ್ನು ಬಲಪಡಿಸುವುದು ಅತ್ಯಂತ ಅಗತ್ಯವಾಗಿದೆ. ಎಲ್ಲಾ ಕ್ಷೇತ್ರಗಳಲ್ಲಿ ಸಮಾನ ಅವಕಾಶಗಳನ್ನು ಪಡೆದು ಮಹಿಳೆಯರು ಮುನ್ನಡೆಯಬೇಕು ಎಂದು ಭರವಸೆ ಬೆಳಕು ಫೌಂಡೇಶನ್ ಅಧ್ಯಕ್ಷೆ ರೂಪಾ ಕಾಂಬಳೆ ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದರು. ಮಹಿಳಾ ದಿನಾಚರಣೆ ಅಂಗವಾಗಿ ನಮ್ಮ ಭರವಸೆ ಬೆಳಕು ಫೌಂಡೇಶನ್ ದ್ವಿತೀಯ ವರ್ಷದ ವಾರ್ಷಿಕೋತ್ಸವ. ವಿಶ್ವ ಮಹಿಳಾ ದಿನಾಚರಣೆ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಅರ್ಥಪೂರ್ಣವಾದ ಕಾರ್ಯಕ್ರಮವನ್ನು ಇದೇ ಮಾರ್ಚ್ 31ರಂದು ಬೆಳಗ್ಗೆ 10 ಗಂಟೆಗೆ ಪಟ್ಟಣದ ಗಚ್ಚಿನ ಮಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನ ಗಚ್ಚಿನ ಮಠದ ಶಿವಬಸವ ಸ್ವಾಮೀಜಿ ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ನೆರವೇರಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಲಕ್ಷ್ಮಣ ಸವದಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಹಾಗೆ ಪುರಸಭೆ ಅಧ್ಯಕ್ಷರು.



ಉಪಾಧ್ಯಕ್ಷರು ಸೇರಿದಂತೆ ತಾಲೂಕಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿರುವರು.

ತಾಲೂಕಿನ ಹಾಗೂ ಅದರಲ್ಲೂ ವಿಶೇಷವಾಗಿ ಗ್ರಾಮೀಣ ಭಾಗದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ತಮ್ಮಲ್ಲಿ ಏನಾದರೂ ಸಮಸ್ಯೆಗಳಿದ್ದಲ್ಲಿ ಡಾ. ನಾಗಲಕ್ಷ್ಮಿ ಚೌಧರಿ ಅವರಿಂದ ಪರಿಹಾರ ಕಂಡು ಕೊಳ್ಳಬೇಕು ಎಂದು ಮನವಿ ಮಾಡಿದರು.

ಆನಂತರ ಕರುನಾಡು ಕಾರ್ಮಿಕ ವೇದಿಕೆಯ ಬೆಳಗಾವಿ ಜಿಲ್ಲಾ ಅಧ್ಯಕ್ಷೆ ರಾಣಿ ಬಡಿಗೇರ ಮಾತನಾಡಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಮೊದಲ ಬಾರಿಗೆ ಅಥಣಿಗೆ ಆಗಮಿಸುತ್ತಿದ್ದಾರೆ. ಮಹಿಳೆಯರು ಬೆಂಗಳೂರಿಗೆ ಹೋಗಿ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳುವುದು ಕಷ್ಟಸಾಧ್ಯ. ಹೀಗಾಗಿ ಅಥಣಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಮಹಿಳೆಯರು ಈ ಕಾರ್ಯಕ್ರಮಕ್ಕೆ ಆಗಮಿಸಿ, ತಮ್ಮ ಕುಂದು ಕೊರತೆಗಳನ್ನು ನೇರವಾಗಿ ಅವರ ಗಮನಕ್ಕೆ ತಂದು ಸರ್ಕಾರದಿಂದ ಸಿಗಬೇಕಾದ ಸೌಲಭ್ಯಗಳನ್ನು ಪಡೆದುಕೊಳ್ಳಲು ಇದೊಂದು ಉತ್ತಮ ಅವಕಾಶ ಎಂದರು.

ಈ ಪತ್ರಿಕಾಗೋಷ್ಠಿಯಲ್ಲಿ ಡಾ. ಭಾರತಿ ವಿಜಾಪುರೆ. ರಾಣಿ ಬಡಿಗೇರ. ಕಾದಂಬರಿ ಅಕ್ಕೋಳ. ಸವಿತಾ ಕಾಂಬಳೆ, ಗೀತಾ ಮಡ್ಡಿ, ವೈಶಾಲಿ ಮೇಲ್ಗಡೆ, ಹಣಮಂತ ಕುರಬರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE